ಸಂಪುಟ : 11 ಸಂಚಿಕೆ: 87 ಪುಟ : 4+2 ಬೆಲೆ: 3.00 ಬುಧವಾರ ಮೇ 06 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 87 Pages : 4+2 Price : 3.00 Wednesday May 6 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಾತ್ರೆ ಅವಘಡ: ಸಿದ್ದರಾಮ ಶ್ರೀಗಳ ಪ್ರತಿಕ್ರಿಯೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ಮಠದ ಜಾತ್ರಾಮಹೋತ್ಸವದಲ್ಲಿ ಸಂಭವಿಸಿದ ಅವಘಡದಲ್ಲಿ 20ಕ್ಕೂ ಹೆಚ್ಚು ಜನರು ಗಾಯಗೊಂಡಿರುವುದು ಅತ್ಯಂತ ದುಃಖದ ಸಂಗತಿ ಎಂದು ತೋಂಟ-ದಾರ್ಯ ಮಠದ ಸಿದ್ದರಾಮ ಶ್ರೀಗಳು ಹೇಳಿದ್ದಾರೆ.

ಗಾಯಾಳುಗಳು ಶೀಘ್ರ ಗುಣಮುಖರಾಗಲೆಂದು ಭಗವಂತನಲ್ಲಿ ಪ್ರಾರ್ಥಿಸಿದ ಅವರು, ಜಿಲ್ಲಾಸ್ಪತ್ರೆಯಲ್ಲಿ ಗಾಯಾಳುಗಳಿಗೆ ಸಮರ್ಪಕ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಮನವಿ ಮಾಡಿದ್ದಾರೆ. ಈ ಮನವಿಗೆ ಸ್ಪಂದಿಸಿದ ವೈದ್ಯರು, ಎಲ್ಲ ಗಾಯಾಳುಗಳಿಗೆ ಅಗತ್ಯವಾದ ಚಿಕಿತ್ಸೆಯನ್ನು ನೀಡಲಾಗುತ್ತಿದ್ದು, ಅವರ ಆರೋಗ್ಯದಲ್ಲಿ ಸುಧಾರಣೆ ಕಂಡು ಬರುತ್ತಿದೆ ಎಂದು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳು ಸಹ ಈ ವಿಷಯದಲ್ಲಿ ವಿಶೇಷ ಆಸಕ್ತಿ ವಹಿಸಿ, ಜಿಲ್ಲಾಸ್ಪತ್ರೆಯ ವೈದ್ಯರೊಂದಿಗೆ ಸಮಾಲೋಚನೆ ನಡೆಸಿ ಚಿಕಿತ್ಸೆಯಲ್ಲಿ ಯಾವುದೇ ಲೋಪಗಳಾಗದಂತೆ ಕಾಳಜಿ ವಹಿಸಲು ಸೂಚಿಸಿದ್ದಾರೆ.

ಜಾತ್ರಾ ಮಹೋತ್ಸವ ಸಮಿತಿಯ ಪದಾಧಿಕಾರಿಗಳು ಹಾಗೂ ಆಡಳಿತ ಸಿಬ್ಬಂದಿಯವರು ಗಾಯಾಳುಗಳ ಬಗ್ಗೆ ನಿರಂತರ ಗಮನ ಹರಿಸಿ, ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಂಡಿದ್ದಾರೆ ಎಂದು ಶ್ರೀಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವನ್ನು ಮೇ 16, 2026ರವರೆಗೆ ವಿಸ್ತರಿಸಲಾಗಿದೆ.

ಈ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮೆಹಬೂಬ್ ತುಂಬರಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಕಾಲಿಕ ಮಳೆ ಹಾನಿ: ಬಿದ್ದ ವಿದ್ಯುತ್ ಕಂಬಗಳ ತುರ್ತು ದುರಸ್ತಿಗೆ ಎಸ್.ಆರ್. ಪಾಟೀಲ ಸೂಚನೆ

# ರೈತರ ಕೆಲಸಗಳಿಗೆ ತೊಂದರೆ ಆಗದಂತೆ ಕಾರ್ಯನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಸಂಭವಿಸಿದ ಅಕಾಲಿಕ ಮಳೆ ಹಾಗೂ ಗಾಳಿಯಿಂದಾಗಿ ಕೆಲವು ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳು ಬಿದ್ದು, ತಂತಿಗಳು ಹಾನಿಗೊಳಗಾಗಿರುವುದು ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆಗಳು ತುರ್ತಾಗಿ ಕ್ರಮ ಕೈಗೊಂಡು ಕಂಬಗಳನ್ನು ಸರಿಪಡಿಸಿ, ಸಮಸ್ಯೆಯನ್ನು ಪರಿಹರಿಸಬೇಕು. ರೈತರ ಕೃಷಿ ಕಾರ್ಯಕ್ಕೆ ಯಾವುದೇ ರೀತಿಯ ತೊಂದರೆ ಆಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಅವರು ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಗ್ಯಾರಂಟಿ ಯೋಜನೆಗಳ ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂಗನವಾಡಿ ಕೇಂದ್ರಗಳು, ಖಾಸಗಿ ಶಾಲೆಗಳು ಹಾಗೂ ಸರ್ಕಾರಿ ಶಾಲೆಗಳ ಆವರಣಗಳಲ್ಲಿ ವಿದ್ಯುತ್ ಕಂಬಗಳು ವಾಲಿರುವುದನ್ನು ಗಮನಿಸಿ, ಮಕ್ಕಳ ಸುರಕ್ಷತೆ ಹಿನ್ನಲೆಯಲ್ಲಿ ಅವುಗಳನ್ನು ತಕ್ಷಣ ಸ್ಥಳಾಂತರಿಸುವಂತೆ ಸೂಚಿಸಿದರು. ಇಂತಹ ಸಮಸ್ಯೆಗಳಿದ್ದಲ್ಲಿ ಸಂಬಂಧಪಟ್ಟ ಇಲಾಖೆಯ



ಗಮನಕ್ಕೆ ತರಬೇಕು ಎಂದು ಹೇಳಿದರು.

ಯುವನಿಧಿ ಯೋಜನೆ ಕುರಿತು ಗ್ರಾಮ ಮಟ್ಟದಲ್ಲಿ ತಿಳುವಳಿಕೆ ಕಾರ್ಯಕ್ರಮಗಳನ್ನು ನಡೆಸಬೇಕು. ಕೋಚಿಂಗ್ ಕ್ಲಾಸ್‌ಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳು ಮತ್ತು ಯುವಕರಿಗೆ ಯೋಜನೆಯ ಬಗ್ಗೆ ಮಾಹಿತಿ ನೀಡಬೇಕು. ಗ್ರಾಮ ಮಟ್ಟದಲ್ಲಿ ಸಭೆಗಳು, ಜಾಗೃತಿ ಕಾರ್ಯಕ್ರಮಗಳು ಹಾಗೂ ಮಾಹಿತಿ ಶಿಬಿರಗಳನ್ನು ಆಯೋಜಿಸುವ ಮೂಲಕ ನಿರುದ್ಯೋಗಿ ಯುವಕರಿಗೆ ಯೋಜನೆಯ ಪ್ರಯೋಜನಗಳು, ಅರ್ಜಿ ಸಲ್ಲಿಸುವ ವಿಧಾನ ಮತ್ತು ಅರ್ಹತೆಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡಬೇಕು. ಇದರಿಂದ ಹೆಚ್ಚಿನ ಯುವಕರು ಯೋಜನೆಯ ಲಾಭ ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ನಗರದಲ್ಲಿ ಯುವನಿಧಿ ಯೋಜನೆಯ ಫಲಾನುಭವಿಗಳಿಗಾಗಿ ಟೆಲಿಗ್ರಾಂ ಗುಂಪು ರಚಿಸಿ, ತರಬೇತಿ ದಿನಾಂಕ, ಸಮಯ, ಸ್ಥಳ, ಕೋರ್ಸ್ ವಿಷಯ ಹಾಗೂ ಸಂಬಂಧಿತ ಮಾಹಿತಿಗಳನ್ನು ಹಂಚಿಕೊಳ್ಳುವಂತೆ ಸೂಚಿಸಿದರು.

▸▸ 2ನೇ ಪುಟಕ್ಕೆ

### ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ

ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಾಗಿದೆ.

ಯುವನಿಧಿ ಯೋಜನೆ: ಇಲ್ಲಿಯವರೆಗೆ 11,985 ಅರ್ಜಿಗಳು ಸ್ವೀಕರಿಸಲಾಗಿದ್ದು, ಡಿ.ಬಿ.ಟಿ ಮೂಲಕ 9,780 ಫಲಾನುಭವಿಗಳಿಗೆ ಸಹಾಯಧನ ಜಮೆಯಾಗಿದೆ. ಒಟ್ಟು ರೂ. 27.60 ಕೋಟಿ ಹಣ ಬಿಡುಗಡೆ ಮಾಡಲಾಗಿದೆ.

ಶಕ್ತಿ ಯೋಜನೆ: ಯೋಜನೆ ಪ್ರಾರಂಭವಾದ ನಂತರ 5,988.44 ಲಕ್ಷ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, ಸರ್ಕಾರದಿಂದ ರೂ. 1,52,158.52 ಲಕ್ಷ ಬಿಡುಗಡೆ ಮಾಡಲಾಗಿದೆ.

ಗೃಹ ಜ್ಯೋತಿ ಯೋಜನೆ: 5,10,864 ಫಲಾನುಭವಿಗಳು ಇದ್ದು, ಒಟ್ಟು ರೂ. 72,951.16 ಲಕ್ಷ ಬಿಡುಗಡೆ ಮಾಡಲಾಗಿದೆ.

ಗೃಹಲಕ್ಷ್ಮಿ ಯೋಜನೆ: 4,03,696 ಫಲಾನುಭವಿಗಳಿಗೆ ಒಟ್ಟು ರೂ. 2,119.22 ಕೋಟಿ ಹಣ ಬಿಡುಗಡೆ ಮಾಡಲಾಗಿದೆ.

ಅನ್ನಭಾಗ್ಯ ಯೋಜನೆ: 3,62,516 ಫಲಾನುಭವಿಗಳು ಇದ್ದು, ಒಟ್ಟು ರೂ. 358.28 ಲಕ್ಷ ಹಣ ಬಿಡುಗಡೆ ಮಾಡಲಾಗಿದೆ.

### 769 ಫೋನ್‌ಗಳನ್ನು ಪತ್ತೆಹಚ್ಚಿದ ಪೊಲೀಸ್ ಇಲಾಖೆ!

# ಕಳೆದುಹೋದ ಮೊಬೈಲ್‌ಗಳಿಗೆ ಮರುಜೀವ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪೊಲೀಸ್ ಇಲಾಖೆಯು ಕೇವಲ ನಾಲ್ಕು ತಿಂಗಳ ಅವಧಿಯಲ್ಲಿ ಜಿಲ್ಲೆಯಾದ್ಯಂತ ಕಳೆದುಹೋಗಿದ್ದ ಹಾಗೂ ಕಳ್ಳತನವಾಗಿದ್ದ 1.13 ಕೋಟಿ ರೂ. ಮೌಲ್ಯದ 769 ಮೊಬೈಲ್ ಫೋನ್‌ಗಳನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದೆ.

ಮಂಗಳವಾರ ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ ಜಗದೀಶ ಅವರು, 2026ರ ಜನವರಿ 1ರಿಂದ ಕಳೆದ ಕೇವಲ ನಾಲ್ಕು ತಿಂಗಳಲ್ಲಿ ಈ ಬೃಹತ್ ಪ್ರಮಾಣದ ಮೊಬೈಲ್‌ಗಳನ್ನು ಪತ್ತೆಹಚ್ಚಲಾಗಿದೆ ಎಂದು ತಿಳಿಸಿದರು.

ಫೆಬ್ರವರಿ 2023ರಲ್ಲಿ ಸಿ.ಇ.ಐ.ಆರ್



(Central Equipment Identity Register) ಜಾರಿಗೆ ಬಂದಾಗಿನಿಂದ ಈವರೆಗೆ ಒಟ್ಟು 5,546 ಮೊಬೈಲ್‌ಗಳನ್ನು ಬ್ಲಾಕ್ ಮಾಡಲಾಗಿದೆ. ಈ ಪೈಕಿ 3,251 ಮೊಬೈಲ್‌ಗಳು ಪತ್ತೆಯಾಗಿದ್ದು, ಈಗಾಗಲೇ 2,295 ಮೊಬೈಲ್‌ಗಳನ್ನು ಮಾಲೀಕರಿಗೆ ಮರಳಿಸಲಾಗಿದೆ ಎಂದು ಅವರು ಹೇಳಿದರು.

ಪತ್ತೆಯಾದ 769 ಮೊಬೈಲ್‌ಗಳಲ್ಲಿ ರೋಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಮೊಬೈಲ್‌ಗಳು ಪತ್ತೆಯಾಗಿವೆ. ರೋಣದಲ್ಲಿ 166, ಗದಗ ಶಹರದಲ್ಲಿ 131, ಮುಂಡರಗಿಯಲ್ಲಿ 109, ಗದಗ ಗ್ರಾಮೀಣ ಹಾಗೂ ಲಕ್ಷ್ಮೇಶ್ವರದಲ್ಲಿ ತಲಾ 83, ಗಜೇಂದ್ರಗಡದಲ್ಲಿ 53, ಬಡಾವಣೆ ಠಾಣೆಯಲ್ಲಿ 46, ನರಗುಂದದಲ್ಲಿ 41, ಸಿ.ಇ.ಎನ್ ವಿಭಾಗದಲ್ಲಿ 17, ಮುಳಗುಂದದಲ್ಲಿ 14, ನರೇಗಲ್‌ನಲ್ಲಿ 13, ಬೆಟಗೇರಿಯಲ್ಲಿ 8 ಹಾಗೂ ಶಿರಹಟ್ಟಿ ಠಾಣೆಯಲ್ಲಿ 5 ಮೊಬೈಲ್‌ಗಳನ್ನು ಪತ್ತೆ ಮಾಡಲಾಗಿದೆ ಎಂದು ವಿವರಿಸಿದರು.

ಈ ಯಶಸ್ವಿ ಕಾರ್ಯಾಚರಣೆಯಲ್ಲಿ ಡಿಎಸ್‌ಪಿಗಳಾದ ಎಂ.ಐ. ಸಜ್ಜನ, ಮುರ್ತುಜಾ ಖಾದ್ರಿ, ಪ್ರಭುಗೌಡ ಕಿರೇದಹಳ್ಳಿ ಹಾಗೂ ಜಿಲ್ಲೆಯ ವಿವಿಧ ಠಾಣೆಗಳ ಸಿಪಿಐಗಳು, ಪಿಎಸ್‌ಐಗಳು ಮತ್ತು ತಾಂತ್ರಿಕ ವಿಭಾಗದ ಸಿಬ್ಬಂದಿ ಸಕ್ರಿಯವಾಗಿ ಪಾಲ್ಗೊಂಡಿದ್ದಾರೆ. ಕರ್ತವ್ಯದಕ್ಷತೆ ಮೆರೆದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಕ್ತ ಬಹುಮಾನ ನೀಡಲಾಗುವುದು ಎಂದು ಎಸ್ಪಿ ರೋಹನ ಜಗದೀಶ ತಿಳಿಸಿದ್ದಾರೆ.

### ಕೊಡಗಿನ ಸಂಸ್ಕೃತಿ ಜಗತ್ತಿಗೆ ಮಾದರಿ – ಸಮಾಜ ಭವನ ಉದ್ಘಾಟನೆ ವೇಳೆ ಬಸವರಾಜ ಬೊಮ್ಮಾಯಿ ಪ್ರಶಂಸೆ

# ಕೊಡವರ ಡಿಎನ್‌ಎಯಲ್ಲೇ ಪ್ರಾಮಾಣಿಕತೆ



■ ವಿಜಯಸಾಕ್ಷಿ ಸುದ್ದಿ, ಮಡಿಕೇರಿ

ಕೊಡಗಿನ ಜನರು ವೀರರು, ಧೀರರು, ಶೂರರು ಮತ್ತು ಸಮರ್ಥರು ಮಾತ್ರವಲ್ಲದೆ ಅತ್ಯಂತ ಪ್ರಾಮಾಣಿಕರು. ಕೊಡವರ ಡಿಎನ್‌ಎಯಲ್ಲಿಯೇ ಪ್ರಾಮಾಣಿಕತೆ ಅಡಕವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಕೊಡಗಿನ ಮಾದಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೊಡವ ಸಮಾಜದ ಸಮುದಾಯ ಭವನವನ್ನು ಉದ್ಘಾಟಿಸಿ ಮಾತನಾಡಿದ ಅವರು, "ನಿಮ್ಮ ಸಂಸ್ಕಾರ ಮತ್ತು ಸಂಸ್ಕೃತಿ ಜಗತ್ತು ಮೆಚ್ಚುವಂತಹದು. ನೀವು ನೀಡಿದ ಅವಕಾಶಗಳಿಂದಲೇ ನಾವು ಶಾಸಕ, ಮಂತ್ರಿ ಹಾಗೂ ಮುಖ್ಯಮಂತ್ರಿ ಸ್ಥಾನಗಳನ್ನು ಅಲಂಕರಿಸಿದ್ದೇವೆ. ನಿಮ್ಮ ಸೇವೆಗೆ ನಾವು ಸದಾ ಕೃತಜ್ಞರಾಗಿದ್ದೇವೆ" ಎಂದು ಹೇಳಿದರು.

ಯಾರಾದರೂ ಸಹಾಯ ಮಾಡಿದರೆ ಅದನ್ನು ಸ್ಮರಿಸುವ ಗುಣ ಮನುಷ್ಯನ ಅತ್ಯುತ್ತಮ ಗುಣವೆಂದು ಹೇಳಿದ ಅವರು, ಕೊಡವರ ಈ ಗುಣ ಅತ್ಯಂತ ವಿಶಿಷ್ಟವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಸ್ಕೃತಿ-ನಾಗರಿಕತೆ ವ್ಯತ್ಯಾಸ ವಿವರಿಸಿದ ಬೊಮ್ಮಾಯಿ

ಕೊಡಗಿನ ಜನರು ನೇರ ನುಡಿಯವರು, ಸತ್ಯವನ್ನು ಸತ್ಯವಾಗಿ ಹೇಳುವ ಗುಣ ಹೊಂದಿದ್ದಾರೆ. ಜಗತ್ತಿನಲ್ಲಿ ಅಪರೂಪವಾಗಿರುವ ಪ್ರಾಮಾಣಿಕತೆ ಇವರಲ್ಲಿ ಸಹಜವಾಗಿದೆ ಎಂದು ಹೇಳಿದರು.

ನಾಗರಿಕತೆ ಮತ್ತು ಸಂಸ್ಕೃತಿ ನಡುವಿನ ವ್ಯತ್ಯಾಸವನ್ನು ವಿವರಿಸಿದ ಅವರು, "ನಾವು ಹೊಂದಿರುವ ಸೌಲಭ್ಯಗಳು ನಾಗರಿಕತೆ; ಆದರೆ ನಾವು ಯಾರು ಎನ್ನುವುದನ್ನು ನಿರ್ಧರಿಸುವುದು ಸಂಸ್ಕೃತಿ. ಕೊಡಗಿನ ಸಂಸ್ಕೃತಿ ವಿಶಿಷ್ಟವಾಗಿದ್ದು, ಸಮುದಾಯದೊಂದಿಗೆ ಬೆಸೆದುಕೊಂಡಿದೆ" ಎಂದು ತಿಳಿಸಿದರು.

> "ಕೊಡವರ ಸಂಸ್ಕೃತಿ, ಸಂಸ್ಕಾರ ಮತ್ತು ಪ್ರಾಮಾಣಿಕತೆ ದೇಶಕ್ಕೆ ಮಾದರಿ"
> –ಬಸವರಾಜ ಬೊಮ್ಮಾಯಿ, ಲೋಕಸಭಾ ಸದಸ್ಯರು

ದೇಶದ ಅಭಿವೃದ್ಧಿಗೆ ಪರಂಪರೆ ಮತ್ತು ಅಭಿವೃದ್ಧಿ ಎರಡೂ ಸಮಾನವಾಗಿ ಅಗತ್ಯವಾಗಿದ್ದು, ಈ ದಿಕ್ಕಿನಲ್ಲಿ ನರೇಂದ್ರ ಮೋದಿ ಅವರ ಮಾರ್ಗದರ್ಶನ ಮಹತ್ವದ್ದಾಗಿದೆ ಎಂದರು. ಕೊಡಗಿನ ಜನರು ತಮ್ಮ ಪರಂಪರೆಯನ್ನು ಕಾಪಾಡಿಕೊಂಡು ಹೋಗುತ್ತಿರುವುದು ಶ್ಲಾಘನೀಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮೈಸೂರು-ಕೊಡಗು ಸಂಸದ ಯದುವೀರ ಒಡೆಯರ್, ಮಾಜಿ ಸಚಿವ ಅಪ್ಪಚ್ಚು ರಂಜನ್ ಹಾಗೂ ಮಾದಾಪುರ ಕೊಡವ ಸಮಾಜದ ಅಧ್ಯಕ್ಷ ಮಂಡೆಪಂಡ ಮನು ಮೇದಪ್ಪ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಬಸ್ ನಿಲ್ದಾಣದಲ್ಲಿ ಸರ ಕಳ್ಳತನ ಮಾಡಿದ್ದ ಅಂತರರಾಜ್ಯ ಕಳ್ಳನ ಬಂಧನ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಸ್ ನಿಲ್ದಾಣದಲ್ಲಿ ಒಂದೇ ದಿನ ನಾಲ್ವರು ಮಹಿಳೆಯರ ಬಂಗಾರದ ತಾಳಿ ಸರ ಕದ್ದು ಪರಾರಿಯಾಗಿದ್ದ ಅಂತರರಾಜ್ಯ ಕಳ್ಳನನ್ನು ಲಕ್ಷ್ಮೇಶ್ವರ ಪೊಲೀಸರು ಬಂಧಿಸಿದ್ದಾರೆ.

ಮಹಾರಾಷ್ಟ್ರ ಮೂಲದ ರಾಜವೀರ ರೈಮು ಕಾಳೆ (25) ಎಂಬ ಆರೋಪಿತನನ್ನು ಬಂಧಿಸಿರುವ ಪೊಲೀಸರು, ಆತನಿಂದ ಸುಮಾರು ರೂ. 2.20 ಲಕ್ಷ ಮೌಲ್ಯದ ನಾಲ್ಕು ಬಂಗಾರದ ತಾಳಿ ಸರಗಳನ್ನು ವಶಪಡಿಸಿಕೊಂಡಿದ್ದಾರೆ.

ಎಪ್ರಿಲ್ 10ರಂದು ಬಸ್ ಹತ್ತುವ ಗೊಂದಲದ ಸಂದರ್ಭವನ್ನು ದುರುಪಯೋಗ ಪಡಿಸಿಕೊಂಡು ಆರೋಪಿತನು ಸರಗಳನ್ನು ಎಗರಿಸಿದ್ದನು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ತ್ವರಿತ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಜಿಲ್ಲಾ ಎಸ್ಪಿ ರೋಹನ್ ಜಗದೀಶ್ ಹಾಗೂ ಡಿವೈಎಸ್‌ಪಿ ಮುರ್ತಾಜ್ ಖಾದ್ರಿ ಮಾರ್ಗದರ್ಶನದಲ್ಲಿ ಸಿಪಿಐ ಬಿ.ವಿ. ನ್ಯಾಮಗೌಡ್ರ ನೇತೃತ್ವದಲ್ಲಿ ಪಿಎಸ್‌ಐ ನಾಗರಾಜ ಗಡಾದ, ಟಿ.ಕೆ. ರಾಠೋಡ, ಪೂಜಾ ಪಾರ್ಥನಳ್ಳಿ ಅವರನ್ನೊಳಗೊಂಡ ತಂಡ ಈ ಕಾರ್ಯಾಚರಣೆ ನಡೆಸಿತು.

ಇದಕ್ಕೂ ನಡುವೆ, ಬಸ್ ನಿಲ್ದಾಣದಲ್ಲೇ ಜನರನ್ನು ಬೆದರಿಸಿ ಹಣ ಕಸಿದುಕೊಳ್ಳುತ್ತಿದ್ದ ಮತ್ತೊಂದು ಪ್ರಕರಣದಲ್ಲಿ ಮೂವರು ಆರೋಪಿತರನ್ನು ಬಂಧಿಸಿ, ಅವರಿಂದ ರೂ. 6,100 ನಗದು ಹಾಗೂ ಒಂದು ಬೈಕ್ ವಶಪಡಿಸಿಕೊಳ್ಳಲಾಗಿದೆ.

ಪೊಲೀಸರ ತಂಡದಲ್ಲಿ ಪಿ.ಡಿ. ಮ್ಯಾಗೇರಿ, ಆರ್.ಎಸ್. ಯರಗಟ್ಟಿ, ಎಂ.ಎ. ಶೇಖ್, ಎಂ.ಎಸ್. ಬಳ್ಳಾರಿ, ಆನಂದ ಕಮ್ಮಾರ, ಸಿ.ಎಸ್. ಮಠಪತಿ, ಡಿ.ಎಸ್. ನಧಾಪ್, ಎ.ಎಲ್. ಕರ್ಜಗಿ, ಹೆಚ್.ಐ. ಕಲ್ಲಣ್ಣವರ, ಅಪ್ಪಣ್ಣ ರಾಠೋಡ ಸೇರಿದಂತೆ ಹಲವರು ಭಾಗವಹಿಸಿದ್ದರು.

ಪೊಲೀಸರ ಈ ದಕ್ಷ ಕಾರ್ಯಾಚರಣೆಗೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.

# ರೈತರ ಕೆಲಸಗಳಿಗೆ ತೊಂದರೆ ಆಗದಂತೆ ಕಾರ್ಯನಿರ್ವಹಿಸಿ

▸▸ ಮೊದಲನೇ ಪುಟದಿಂದ

ಸಾರ್ವಜನಿಕ ಸ್ಥಳಗಳಲ್ಲಿ ಸ್ಟಾಲ್‌ಗಳನ್ನು ಅಳವಡಿಸಿ ಯೋಜನೆ ಕುರಿತು ಮಾಹಿತಿ ನೀಡಬೇಕು. ಜನರಿಗೆ ಯೋಜನೆಯ ಲಾಭಗಳು, ನೋಂದಣಿ ಪ್ರಕ್ರಿಯೆ ಹಾಗೂ ತರಬೇತಿ ವಿವರಗಳನ್ನು ಸ್ಪಷ್ಟವಾಗಿ ತಿಳಿಸಲಾಗುತ್ತಿದೆ ಎಂದು ಅವರು ಹೇಳಿದರು.

ಸಾರ್ವಜನಿಕರು ಹಾಗೂ ಸಂಬಂಧಿತ ಅಧಿಕಾರಿಗಳು ಕೇಳುವ ಮಾಹಿತಿಯನ್ನು ಸಮಯಕ್ಕೆ ಸರಿಯಾಗಿ ನೀಡಬೇಕು ಎಂದು ಹೇಳಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮುರಗಯ್ಯಾ ವಿರಕ್ತಮಠ, ಶಾಂತಪ್ಪ ಎಸ್. ಅಕ್ಕಿ, ರೇಹಾನ್ ರಝಾ ಐನಾಪೂರಿ, ರತ್ನಾ ತೇಗೂರಮಠ ಅವರು ಮಾತನಾಡಿದರು. ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊಗಲಬಾವಿ ಸ್ವಾಗತಿಸಿ, ವಂದಿಸಿದರು.

ಸಭೆಯಲ್ಲಿ ಪ್ರಾಧಿಕಾರದ ಸದಸ್ಯರಾದ ವಿನಾಯಕ ಕುರುಬರ, ಬಸಪ್ಪ ಮಹಾಬಲೇಶ್ವರ ಬಾವುಕಾರ, ಅರವಿಂದ ಏಗನಗೌಡರ, ಸಾವಿತ್ರಿ ಬಸವರಾಜ ಭಗವತಿ, ಸತೀಶ ಚನ್ನಬಸಯ್ಯ ಕೊಬ್ಬಯ್ಯನವರ ಸೇರಿದಂತೆ ಇತರ ಸದಸ್ಯರು ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

**ಆಡಳಿತ ಭಾಷೆಯಾಗಿ ಕನ್ನಡ ಜಾರಿಗೊಳಿಸುವ ಅಗತ್ಯ-ಸಾಹಿತ್ಯದ ಮೂಲಕ ನಾಡು-ನುಡಿ ಸಂರಕ್ಷಣೆಗೆ ರತ್ನಾ ಗಿರೋಸಾ ಬದಿ ಕರೆ**

# ಕನ್ನಡ ಉಳಿವು-ಬೆಳವಣಿಗೆಗೆ ಎಲ್ಲರೂ ಕ್ರಿಯಾಶೀಲರಾಗಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಮಾತೃಭಾಷೆಯಾದ ಕನ್ನಡವನ್ನು ಆಡಳಿತ ಭಾಷೆಯಾಗಿ ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಕನ್ನಡಿಗರಿಗೆ ಕನ್ನಡವೇ ಜೀವಾಳವಾಗಿದ್ದು, ಹಿಂದಿ ಹಾಗೂ ಇಂಗ್ಲಿಷ್ ಭಾಷೆಗಳು ಶಿಕ್ಷಣ, ಜ್ಞಾನ ಮತ್ತು ಸಂಪರ್ಕಕ್ಕಾಗಿ ಮಾತ್ರ ಬಳಕೆಯಾಗಲಿ ಎಂದು ರಾಜ್ಯ ಸರ್ಕಾರದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತರಾದ ಮುಖ್ಯೋಪಾಧ್ಯಾಯಿನಿ ಹಾಗೂ ಸಾಹಿತಿ ಶ್ರೀಮತಿ ರತ್ನಾ ಗಿರೋಸಾ ಬದಿ ಹೇಳಿದರು.



> ಸಮ್ಮೇಳನದಲ್ಲಿ ಕನ್ನಡವನ್ನು ಆಡಳಿತ ಭಾಷೆಯಾಗಿ ಸಂಪೂರ್ಣವಾಗಿ ಜಾರಿಗೊಳಿಸುವ ಅಗತ್ಯತೆ, ಯುವ ಪೀಳಿಗೆಯಲ್ಲಿ ಕನ್ನಡ ಪ್ರೀತಿಯನ್ನು ಬೆಳೆಸುವ ಮಹತ್ವ ಹಾಗೂ ಸಾಹಿತ್ಯದ ಮೂಲಕ ಸಂಸ್ಕೃತಿಯನ್ನು ಉಳಿಸುವ ಕುರಿತು ಹಲವು ಸಾಹಿತಿಗಳು ಅಭಿಪ್ರಾಯ ವ್ಯಕ್ತಪಡಿಸಿದರು.

ಗದುಗಿನ ಲಯನ್ಸ್ ಭವನದಲ್ಲಿ ಕರ್ನಾಟಕ ರಾಜ್ಯ ಲೇಖಕಿಯರ ಸಂಘ (ಗದಗ ಜಿಲ್ಲಾ ಘಟಕ), ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ (ಗದಗ ಜಿಲ್ಲಾ ಘಟಕ), ಧಾರವಾಡದ ಚೇತನ ಫೌಂಡೇಶನ್ ಹಾಗೂ ಬೆಂಗಳೂರಿನ ಗಂಧದ ಗುಡಿ ಕನ್ನಡ ಸಂಘದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ 'ಕನ್ನಡ ನುಡಿ ಸಡಗರ' ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆಯಾಗಿ ಅವರು ಮಾತನಾಡಿದರು.

ಕನ್ನಡ ಭಾಷೆಯ ಸೊಗಸು ಹಾಗೂ ಸೊಗಡು ಶ್ರೀಮಂತವಾಗಿದ್ದು, ಓದಲು, ಬರೆಯಲು ಮತ್ತು ಮಾತನಾಡಲು ಅತ್ಯಂತ ಇಂಪಾಗಿದೆ. ಕನ್ನಡ ಭಾಷೆಯ ಇತಿಹಾಸ ಹಾಗೂ ಮಹತ್ವ ಅನನ್ಯವಾಗಿದ್ದು, ಜ್ಞಾನಪೀಠ ಪ್ರಶಸ್ತಿಗಳು ಕನ್ನಡ ಸಾಹಿತ್ಯಕ್ಕೆ ದೊರೆತಿರುವುದು ಅದರ ಶ್ರೀಮಂತಿಕೆಯನ್ನು ಸಾಬೀತುಪಡಿಸುತ್ತದೆ ಎಂದು ಹೇಳಿದರು.

> "ಕನ್ನಡಿಗರಿಗೆ ಕನ್ನಡವೇ ಜೀವಾಳ. ಆಡಳಿತದಲ್ಲಿ ಕನ್ನಡ ಕಡ್ಡಾಯವಾಗಬೇಕು; ನಾಡು-ನುಡಿ ಉಳಿಸಲು ಪ್ರತಿಯೊಬ್ಬರೂ ಕ್ರಿಯಾಶೀಲರಾಗಬೇಕು,"
>
> – **ರತ್ನಾ ಗಿರೋಸಾ ಬದಿ,** ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆ

ಕನ್ನಡ ಸಾಹಿತ್ಯ ಕೃತಿಗಳನ್ನು ಓದುವ, ಬರೆಯುವ ಮತ್ತು ಪ್ರಕಟಿಸುವವರ ಸಂಖ್ಯೆ ಹೆಚ್ಚಾಗಬೇಕಿದ್ದು, ನಾಡು-ನುಡಿ-ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಎಲ್ಲರೂ ಕ್ರಿಯಾಶೀಲರಾಗಬೇಕು ಎಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಸಾಹಿತಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಡಾ. ಜಿ. ಪ್ರೇಮಾ ನಿರೂಪಿಸಿ ವಂದಿಸಿದರು.

# ಯುವಕರು ಪ್ರಾಮಾಣಿಕತೆಯಿಂದ ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಬೇಕು

■ ವಿಜಯಸಾಕ್ಷಿ ಸುದ್ದಿ, ರೋಣ

ಸ್ಥಳೀಯ ಸಂಸ್ಥೆಗಳು ಸೇರಿದಂತೆ ವಿಧಾನಪರಿಷತ್ ಚುನಾವಣೆಯ ಸನ್ನಿವೇಶದಲ್ಲಿ ಯುವಕರು ಪ್ರಾಮಾಣಿಕತೆಯಿಂದ ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಬೇಕು ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಕರೆ ನೀಡಿದರು.



ಪಟ್ಟಣದ ಆರ್.ಎಸ್. ಪಾಟೀಲ ಜಿನ್ನಿಂಗ್ ಫ್ಯಾಕ್ಟರಿಯಲ್ಲಿರುವ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ನಡೆದ ಜಿಲ್ಲಾ ಮಟ್ಟದ ಯುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ, ಆಂಗ್ಲ ಮತ್ತು ಉರ್ದು ಭಾಷೆಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಸತ್ಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಾಪಂ, ಜಿಪಂ, ಪುರಸಭೆ ಹಾಗೂ ವಿಧಾನಪರಿಷತ್ ಚುನಾವಣೆಗಳು ಶೀಘ್ರದಲ್ಲೇ ಘೋಷಣೆಯಾಗುವ ಸಾಧ್ಯತೆ ಇದ್ದು, ಪಕ್ಷದ ಬಲವರ್ಧನೆಗೆ ಕಾರ್ಯಕರ್ತರು ಶ್ರಮಿಸಬೇಕು ಎಂದರು. ಒಬ್ಬರ ಮೇಲೆ ಒಬ್ಬರು ಆರೋಪ ಮಾಡುವುದನ್ನು ಬಿಟ್ಟು ಪಕ್ಷದ ಅಭಿವೃದ್ಧಿಗೆ ಒತ್ತು ನೀಡಬೇಕಾಗಿದೆ. ಪಕ್ಷದ ಬಗ್ಗೆ ನಿಷ್ಠೆ ಮತ್ತು ಗೌರವ ಹೊಂದಿದ ಕಾರ್ಯಕರ್ತರು ಅಗತ್ಯವಿದ್ದಾರೆ ಎಂದು ತಿಳಿಸಿದರು.

ಪದಾಧಿಕಾರಿಗಳಾಗಿ ಆಯ್ಕೆಯಾಗಿ ಒಂದು ವರ್ಷವಾಗುತ್ತಿದ್ದರೂ ಕೆಲವರು ಸಭೆಗಳಿಗೆ ಹಾಜರಾಗದಿರುವುದು ವಿಷಾದನೀಯ. ಅಂತಹವರ ಬಗ್ಗೆ ಮೇಲಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ಎಚ್ಚರಿಕೆ ನೀಡಿದರು. ವಿಧಾನಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೋಹನ್ ಲಿಂಬಿಕಾಯಿ ಅವರನ್ನು ಗೆಲ್ಲಿಸಲು ಎಲ್ಲರೂ ಒಗ್ಗೂಡಿ ಕೆಲಸ ಮಾಡಬೇಕು ಎಂದರು.

> ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರು. ಯುವಕರು ಪ್ರಾಮಾಣಿಕತೆಯಿಂದ ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಬೇಕು


ಯುವ ಕಾಂಗ್ರೆಸ್ ಕಾರ್ಯದರ್ಶಿ ಅಕ್ಷಯ ಪಾಟೀಲರ ಸಂಘಟನೆ ಶಕ್ತಿಯನ್ನು ಶ್ಲಾಘಿಸಿದ ಅವರು, ಕಡಿಮೆ ಸಮಯದಲ್ಲಿ ಸಭೆಯನ್ನು ಅಚ್ಚುಕಟ್ಟಾಗಿ ನಡೆಸಿರುವುದು ಮಾದರಿಯಾಗಿದೆ ಎಂದರು. ಮುಂದಿನ ದಿನಗಳಲ್ಲಿ ಗದಗದಲ್ಲಿ ಯುವ ಕಾಂಗ್ರೆಸ್ ವತಿಯಿಂದ ಉದ್ಯೋಗ ಮೇಳ ಆಯೋಜಿಸುವ ಯೋಜನೆ ಇದೆ ಎಂದು ಘೋಷಿಸಿದರು.

> "ಯುವಕರು ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಪಕ್ಷ ಸಂಘಟನೆಯಲ್ಲಿ ತೊಡಗಿ-ಕೊಂಡರೆ ಮಾತ್ರ ಪಕ್ಷ ಬಲವಾಗುತ್ತದೆ,"
>
> – ಕೃಷ್ಣಗೌಡ ಪಾಟೀಲ,

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ರೋಣ ಮತ್ತು ಗಜೇಂದ್ರಗಡ ತಾಲೂಕಿನ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ವಿವೇಕ ಯಾವಗಲ್ಲ, ರಾಜ್ಯ ಕಾರ್ಯದರ್ಶಿ ಅಕ್ಷಯ ಪಾಟೀಲ, ಮುತ್ತುರಾಜ ನವಲಗುಂದ, ಸೋಮು ನಾಗರಾಜ, ಮಹೇಶ್ ಕಳಸಣ್ಣವರ, ಅಸ್ಲಂ ಕೊಪ್ಪಳ, ವಿನಾಯಕ ಜಕ್ಕಣಗೌಡ್ರ, ಗೋಪಿ ರಾಯನಗೌಡ್ರ ಸೇರಿದಂತೆ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಭವಿಷ್ಯದ ಜೀವನಕ್ಕೆ ಕಂಪ್ಯೂಟರ್ ಶಿಕ್ಷಣ ಅವಶ್ಯಕ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಂದಿನ ಯುಗದಲ್ಲಿ ಕಂಪ್ಯೂಟರ್ ಜ್ಞಾನ ಅತ್ಯಂತ ಅಗತ್ಯವಾಗಿದ್ದು, ಮಕ್ಕಳ ಭವಿಷ್ಯದ ಜೀವನ ರೂಪಿಸಲು ಕಂಪ್ಯೂಟರ್ ಶಿಕ್ಷಣ ಅವಿಭಾಜ್ಯವಾಗಿದೆ ಎಂದು ಚಂದ್ರಾಮ ಗ್ರಾಮಪುರೋಹಿತ ಹೇಳಿದರು.

ಪಟ್ಟಣದ ಕೆಜಿಎಂಎಸ್ ದ್ವಿಭಾಷಾ ಶಾಲೆಯಲ್ಲಿ ಆಯೋಜಿಸಿದ್ದ ಬೇಸಿಗೆ ಶಿಬಿರದ ಕಂಪ್ಯೂಟರ್ ತರಬೇತಿ ಮುಕ್ತಾಯ ಸಮಾರಂಭದಲ್ಲಿ ಮಾತನಾಡಿದ ಅವರು, ಸರಕಾರಿ ಶಾಲೆಯ ಮಕ್ಕಳು ಅನೇಕ ಸೌಲಭ್ಯಗಳಲ್ಲಿ ಖಾಸಗಿ ಶಾಲೆಗಳಿಗಿಂತ ಹಿಂದುಳಿದಿರುವ ಉದಾಹರಣೆಗಳಿವೆ. ಆದರೆ ಇಂತಹ ಪರಿಸ್ಥಿತಿಯಲ್ಲಿಯೂ ಮಕ್ಕಳು ಬೇಸಿಗೆ ಸಮಯವನ್ನು ಸದುಪಯೋಗಪಡಿಸಿಕೊಂಡು ಕಂಪ್ಯೂಟರ್ ಶಿಕ್ಷಣ ಕಲಿಯುತ್ತಿರುವುದು ಸಂತಸದ ವಿಚಾರವಾಗಿದೆ ಎಂದು ಹೇಳಿದರು.

ಈ ಅವಕಾಶವನ್ನು ಒದಗಿಸಿದ ಶಾಲೆಯ ಶಿಕ್ಷಕರನ್ನು ಅವರು ಅಭಿನಂದಿಸಿದರು. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಹೊಸ ಕೌಶಲ್ಯಗಳನ್ನು ಬೆಳೆಸುವಲ್ಲಿ ಸಹಾಯಕವಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಮುಖ್ಯೋಪಾಧ್ಯಾಯ ಎಂ.ಎಲ್. ಹೊಸಳ್ಳಿ ಮಾತನಾಡಿ, ಬೇಸಿಗೆಯ ಸಮಯದಲ್ಲಿ ಮಕ್ಕಳಿಗೆ ಉಪಯುಕ್ತ ಕಾರ್ಯ ನೀಡಬೇಕೆಂಬ ಉದ್ದೇಶದಿಂದ ಶಿಕ್ಷಕರು ಚರ್ಚಿಸಿ ಈ ತರಬೇತಿ ಕಾರ್ಯಕ್ರಮವನ್ನು ರೂಪಿಸಿದ್ದಾಗಿ ಹೇಳಿದರು. ಯುಥ್ ಫಾರ್ ಸೇವಾ ಸಂಸ್ಥೆಯ ಸಹಕಾರದಿಂದ ಲಭ್ಯವಾದ ಕಂಪ್ಯೂಟರ್‌ಗಳನ್ನು ಬಳಸಿಕೊಂಡು ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಬಿ. ಬಿ. ಕುರಿ, ಡಿ. ವಿ. ಕಳ್ಳಿ, ಗುರುಮಾತೆಯರಾದ ವಿ. ಎಸ್. ದಿಂಡೂರ, ರೇವತಿ ಹುಬ್ಬಳ್ಳಿ ಉಪಸ್ಥಿತರಿದ್ದರು.

**ಗುರು-ಶಿಷ್ಯ ಬಾಂಧವ್ಯ ಶಾಶ್ವತ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಎ.ಎ. ಭಾವಿಕಟ್ಟಿ ಅಭಿಪ್ರಾಯ**

# ಪ್ರತಿಭಾಸಂಪನ್ನ ಮಕ್ಕಳು ಗುರುಗಳ ನಿಜವಾದ ಆಸ್ತಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗುರು-ಶಿಷ್ಯರ ನಡುವಿನ ಸಂಬಂಧಕ್ಕೆ ಐತಿಹಾಸಿಕ ಹಿನ್ನಲೆ ಇದ್ದು, ಇವರಿಬ್ಬರ ನಡುವಿನ ಬಾಂಧವ್ಯ ಸದಾ ಸ್ಮರಣೀಯವಾಗಿರುತ್ತದೆ. ಒಬ್ಬ ಆದರ್ಶ ಗುರುವಿಗೆ ಶಿಷ್ಯರೇ ನಿಜವಾದ ಆಸ್ತಿಯಾಗುತ್ತಾರೆ ಎಂದು ನಿವೃತ್ತ ಮುಖ್ಯ ಶಿಕ್ಷಕಿ ಎ.ಎ. ಭಾವಿಕಟ್ಟಿ ಹೇಳಿದರು.

> "ಒಬ್ಬ ಆದರ್ಶ ಗುರುವಿಗೆ ಶಿಷ್ಯರೇ ನಿಜವಾದ ಆಸ್ತಿ. ಗುರು-ಶಿಷ್ಯರ ಬಾಂಧವ್ಯ ಜೀವನಪರ್ಯಂತ ಸ್ಮರಣೀಯವಾಗಿರುತ್ತದೆ,"
>
> – **ಎ.ಎ. ಭಾವಿಕಟ್ಟಿ,** ನಿವೃತ್ತ ಮುಖ್ಯ ಶಿಕ್ಷಕಿ

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ 2003 ಮತ್ತು 2004ನೇ ಸಾಲಿನ ಹಳೆಯ ವಿದ್ಯಾರ್ಥಿನಿಯರು ಹಮ್ಮಿಕೊಂಡಿದ್ದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆ ಸಮಾಜಕ್ಕೆ ಪ್ರತಿಭಾನ್ವಿತ ಹಾಗೂ ಸಂಸ್ಕಾರಯುತ ಮಹಿಳೆಯರನ್ನು ನೀಡುತ್ತಿದ್ದು, ನಮ್ಮ ಸಮಿತಿಯಡಿಯಲ್ಲಿ ಆದರ್ಶ ಶಾಲೆಯಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಸಂಸ್ಥೆ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಹಾಗೂ ಹಳೆಯ ವಿದ್ಯಾರ್ಥಿನಿಯರಾದ ರೇಖಾ ಪಾಯಪ್ಪಗೌಡರ, ಮಹಾದೇವಿ ಬೆಳವಡಿ, ಶಿಲ್ಪಾ ಮಠ, ರೇಣುಕಾ ಬಿಷ್ಟಕ್ಕನವರ ಅವರು ತಮ್ಮ ಅನುಭವಗಳನ್ನು ಹಂಚಿಕೊಂಡರು.

ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಎ.ಟಿ. ಮಳ್ಳಳ್ಳಿ, ಬಿ.ಡಿ. ಯರಗೊಪ್ಪ, ಎಂ.ಎಸ್. ಅತ್ತಾರ್, ಎಸ್. ಶಿವಮೂರ್ತಿ, ಶ್ರೀಮತಿ ಎಸ್. ಎಫ್. ಧರ್ಮಾಯತ, ರಮೇಶ್ ಶಿಳ್ಳಿನ, ಬಸಮ್ಮ ಅಸುಂಡಿ, ಸಂಗಮೇಶ ಕುರಡಗಿ, ಬಕುಳಾ ಕಾಳೆ, ವಸುಂಧರಾ ನೀಲಗುಂದ, ಯಾಸ್ಮಿನ್ ಬಳಬಟ್ಟಿ, ಉಮಾ ಹುಯಿಲಗೋಳಮಠ, ಶೈಲಾ ಮಡಿವಾಳರ, ಸಾವಿತ್ರಿ ಗುಬಿ, ರಶ್ಮಿ ಸಂಗನಾಳಮಠ, ವೇದಾವತಿ ಪಲ್ಲೇದ, ಸುಜಾತಾ ಹಿರೇಮಠ, ಬಸವಣ್ಣಿ ಹುಬ್ಬಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮೂವರು ಯುವಕರ ಮೇಲೆ ತಲ್ವಾರ್ ದಾಳಿ!

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಇಲ್ಲಿನ ಅಮನ್ ನಗರದಲ್ಲಿ ಮೂವರು ಯುವಕರ ಮೇಲೆ ದುಷ್ಕರ್ಮಿಗಳು ತಲ್ವಾರ್‌ನಿಂದ ಹಲ್ಲೆ ನಡೆಸಿರುವ ಘಟನೆ ನಡೆದಿದೆ. ಹಳೇ ವೈಷಮ್ಯ ಹಿನ್ನೆಲೆಯಲ್ಲಿ ಈ ದಾಳಿ ನಡೆದಿರುವ ಶಂಕೆ ವ್ಯಕ್ತವಾಗಿದೆ. ದಾಳಿಗೆ ಒಳಗಾದವರನ್ನು ವಲಿ ಶೇಖ್, ಇಮಾಮ್ ಶೇಖ್ ಮತ್ತು ಮಜೀದ್ ಶೇಖ್ ಎಂದು ಗುರುತಿಸಲಾಗಿದೆ. ಗಾಯಾಳುಗಳನ್ನು ತಕ್ಷಣವೇ ಬೆಳಗಾವಿಯ ಬೀಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

# ಮಗು ತೋರಿಸಿಲ್ಲ ಎಂಬ ಸಿಟ್ಟಿಗೆ ಭೀಕರ ದಾಳಿ: ಅತ್ತೆಗೆ ಅಳಿಯನಿಂದ ಚಾಕು ಇರಿತ!

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಕ್ಷುಲ್ಲಕ ಕಾರಣಕ್ಕಾಗಿ ಅಳಿಯನೊಬ್ಬ ತನ್ನ ಅತ್ತೆಗೆ ಚಾಕುವಿನಿಂದ ಇರಿದ ಭೀಕರ ಘಟನೆ ಸವದತ್ತಿ ತಾಲೂಕಿನ ಆಲದಕಟ್ಟಿ ಗ್ರಾಮದಲ್ಲಿ ನಡೆದಿದೆ. ವಿಡಿಯೋ ಕಾಲ್‌ನಲ್ಲಿ ಮಗು ತೋರಿಸಿಲ್ಲ ಎಂಬ ಕಾರಣಕ್ಕೆ ಆರೋಪಿ ಅರವಿಂದ ಗವಳಿ ಸಿಟ್ಟಿಗೆದ್ದಿದ್ದು, ತನ್ನ ಅತ್ತೆ ಮಹಾದೇವಿ (45) ಅವರಿಗೆ ಚಾಕುವಿನಿಂದ ದಾಳಿ ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

**ಮಾಲ್ವಿ ಜಲಾಶಯ ಕಾಮಗಾರಿ ವೀಕ್ಷಣೆ ವೇಳೆ ಶಾಸಕ ಕೆ. ನೇಮಿರಾಜ್ ನಾಯ್ಕ್ ಹೇಳಿಕೆ**

# ಗುಣಮಟ್ಟ-ಪ್ರಾಮಾಣಿಕತೆಗೆ ಒತ್ತು

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

"ನಾನು ಶಾಸಕನಾಗಿದ್ದಾಗಿನಿಂದಲೂ ಕೆಲಸ ಕಾಮಗಾರಿಗಳಲ್ಲಿ ಗುಣಮಟ್ಟ ಹಾಗೂ ಪ್ರಾಮಾಣಿಕತೆಗೆ ಹೆಚ್ಚಿನ ಆದ್ಯತೆ ನೀಡುತ್ತಾ ಬಂದಿದ್ದೇನೆ," ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ್ ಹೇಳಿದರು.

ಮಾಲ್ವಿ ಜಲಾಶಯದ ಗೇಟ್ ಅಳವಡಿಸುವ ಕಾಮಗಾರಿಯನ್ನು ವೀಕ್ಷಿಸಿದ ಬಳಿಕ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.



ಮಾಜಿ ಶಾಸಕ ಭೀಮಾನಾಯ್ಕ ಅವರು ತಮ್ಮ ಅಧಿಕಾರಾವಧಿಯಲ್ಲಿ ಮಾಡಿದ ಕಟ್ಟಡ ಕಾಮಗಾರಿಗಳ ಕುರಿತು ನೀಡಿದ ಹೇಳಿಕೆಯನ್ನು ಉಲ್ಲೇಖಿಸಿದ ಅವರು, "ಅಷ್ಟೊಂದು ಕೆಲಸ ಕಾಮಗಾರಿಗಳು ಎಲ್ಲಿ ನಡೆದಿವೆ ತೋರಿಸಲಿ; ಸುಣ್ಣ ಬಣ್ಣ ಆಮೇಲೆ ಬಳಿಸೋಣ," ಎಂದು ನಗೆ ಚಟಾಕಿ ಹಾರಿಸಿದರು.

ಹೆಬಿಡೆಂಟ್ ಕಂಪನಿಯಿಂದ ನೂರು ಕೋಟಿ ರೂ. ಕಮಿಷನ್ ಪಡೆದಿದ್ದೇನೆ ಎಂಬ ಆರೋಪವನ್ನು ತಳ್ಳಿ ಹಾಕಿದ ಅವರು, ಅದನ್ನು ಸಾಬೀತುಪಡಿಸುವಂತೆ ಸವಾಲು ಹಾಕಿದರು. ಅದೇ ಕಂಪನಿಯಿಂದ ಭೀಮಾನಾಯ್ಕ ಲಂಚ ಕೇಳಿದ ವಿಚಾರ ಜಗಜ್ಜಾಹೀರಾಗಿದೆ ಎಂದು ಪ್ರತಿಕ್ರಿಯಿಸಿದರು.

ಮುಂದಿನ ದಿನಮಾನಗಳಲ್ಲಿ ಹಗರಿಬೊಮ್ಮನಹಳ್ಳಿ ತಾಲೂಕಿನ ಸುತ್ತಮುತ್ತಲಿನ ರಸ್ತೆ ಕಾಮಗಾರಿಗಳಿಗೆ ರೂ. 50 ಕೋಟಿಗೂ ಹೆಚ್ಚು ಅನುದಾನ ತರಲಾಗುವುದು. ಅಲ್ಲದೇ ಎಲ್ಲಾ 23 ವಾರ್ಡ್‌ಗಳಿಗೆ ಸಿಸಿ ರಸ್ತೆಗಳನ್ನು ನಿರ್ಮಿಸಲಾಗುವುದು ಎಂದು ಹೇಳಿದರು.

ಗುತ್ತಿಗೆ ಕಾಮಗಾರಿಗಳ ಸಂದರ್ಭದಲ್ಲಿ ಕಾರ್ಯಕರ್ತರನ್ನು ನಿರ್ಲಕ್ಷಿಸಿದ್ದೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, "ನಮ್ಮ ಕಾರ್ಯಕರ್ತರ ಬಗ್ಗೆ ನಮಗೆ ಏನು ಮಾಡಬೇಕೆಂದು ಗೊತ್ತಿದೆ. ಅವರ ಬಗ್ಗೆ ಮಾತನಾಡುವ ನೈತಿಕತೆ ಭೀಮಾನಾಯ್ಕ ಅವರಿಗೆ ಇಲ್ಲ," ಎಂದು ಹೇಳಿದರು.

> "ನಾನು ಎಲ್ಲಾ ಸಮಾಜಗಳಿಗೆ ಸಮಾನವಾಗಿ ಅನುದಾನ ನೀಡಿದ್ದೇನೆ. ಮಾಜಿ ಶಾಸಕ ತಮ್ಮ ಹತ್ತು ವರ್ಷಗಳ ಅವಧಿಯಲ್ಲಿ ಮತದಾರರಿಗೆ ಏನು ಮಾಡಿದ್ದಾರೆ ಎಂಬುದನ್ನು ತೋರಿಸಲಿ."
>
> – ಕೆ. ನೇಮಿರಾಜ್ ನಾಯ್ಕ್, ಶಾಸಕರು

ಈ ಸಂದರ್ಭದಲ್ಲಿ ತಹಸೀಲ್ದಾರ್ ಕವಿತಾ, ಜಲಾಶಯದ ಸಹಾಯಕ ಕಾರ್ಯಪಾಲನಾ ಅಭಿಯಂತರ ಧರ್ಮರಾಜ್, ಪಿಡಿಒ ಶ್ರೀಕಾಂತ, ಚಿನಿವಾಲರ ಪ್ರಕಾಶ, ನರೇಗಲ್ ಕೊಟ್ರೇಶ್, ನಾಗರಾಜ್ ಜನ್ನು, ಜೆಡಿಎಸ್ ಕ್ಷೇತ್ರಾಧ್ಯಕ್ಷ ವೈ. ಮಲ್ಲಿಕಾರ್ಜುನ, ನಾಣ್ಯಾಪುರ ಕೃಷ್ಣಮೂರ್ತಿ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಬದಾಮಿ ಮೃತ್ಯುಂಜಯ, ಮೌನೇಶ್ ಆಚಾರ್, ಜಗದೀಶ, ಆಡೂರು ಶಿವಕುಮಾರ್, ನೆರಗಲ್ ಕೊಟ್ರೇಶ್, ನೆರಗಲ್ ಬಸವರಾಜ್, ಟಿಪ್ಪು ಮಾಲವಿ, ಗೋವಿಂದ ನಾಯ್ಕ ಸೇರಿದಂತೆ ಪ್ರಮುಖ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ

■ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

: ಪ್ರಸಕ್ತ 2026–27ನೇ ಸಾಲಿನ ಬೀಳಗಿ ಎಸ್.ಆರ್.ನಿರಾಣಿ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನ ಡಿಪ್ಲೋಮಾ ಪ್ರವೇಶ ಕೋರ್ಸಗಳಿಗೆ ಮೆರಿಟ್ ಹಾಗೂ ರೋಷ್ಟರ ಅನುಗುಣವಾಗಿ ಆಫ್‌ಲೈನ್ ಪ್ರವೇಶ ಅವಧಿಯನ್ನು ವಿಸ್ತರಿಸಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸಿವಿಲ್ ಇಂಜಿನೀಯರಿಂಗ್, ಕಂಪ್ಯೂಟರ ಸೈನ್ಸ್, ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್, ಮೆಕ್ಯಾನಿಕಲ್ ಇಂಜಿನೀಯರಿಂಗ್, ಇಲೆಕ್ಟ್ರಿಕಲ್ & ಇಲೆಕ್ಟ್ರಾನಿಕ್ಸ್ ಇಂಜಿನೀಯರಿಂಗ್ ಹೀಗೆ ಒಟ್ಟು 6 ಕೋರ್ಸಗಳಿದ್ದು, ಪ್ರವೇಶಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಟ ಶೇ.35 ರಷ್ಟು ಅಂಕ ಪಡೆದು ಉತ್ತೀರ್ಣರಾದವರಿಗೆ ಮೆರಿಟ್ ಹಾಗೂ ರೋಷ್ಟರ ಅನುಗುಣವಾಗಿ ಆಫ್‌ಲೈನ್ ಮೂಲಕ ಪ್ರವೇಶ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊನಂ.9980230949, 8123326842, 7795489203ಗೆ ಸಂಪರ್ಕಿಸುವಂತೆ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರಾದ ಗೌಸ್ ಎಂ.ಸಾಲವತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ದಾವಣಗೆರೆ ಫಲಿತಾಂಶ: ಅಪಪ್ರಚಾರಕ್ಕೆ ಉತ್ತರ – ಡಿಕೆಶಿ ರಾಜೀನಾಮೆ ಒತ್ತಾಯ**

## ಅಲ್ಪಸಂಖ್ಯಾತರ ನಿಷ್ಠೆಗೆ ಮಾನ್ಯತೆ ನೀಡಬೇಕು

■ವಿಜಯಸಾಕ್ಷಿ ಸುದ್ದಿ, ಗದಗ



ದಾವಣಗೆರೆ ಲೋಕಸಭಾ ಕ್ಷೇತ್ರದ ಚುನಾವಣಾ ಫಲಿತಾಂಶವು ಕೇವಲ ರಾಜಕೀಯ ಗೆಲುವಲ್ಲ, ಸಾಮರಸ್ಯದ ಮೇಲೆ ನಡೆದ ಅಪಪ್ರಚಾರಕ್ಕೆ ಜನರು ನೀಡಿದ ತಕ್ಕ ಉತ್ತರವಾಗಿದೆ ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ರಾಜ್ಯ ಘಟಕದ ಅಧ್ಯಕ್ಷ ಮಹ್ಮದಶಫಿ ನಾಗರಕಟ್ಟೆ ಹೇಳಿದರು.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಚುನಾವಣಾ ಅವಧಿಯಲ್ಲಿ ಅಲ್ಪಸಂಖ್ಯಾತ ಸಮುದಾಯ ಹಾಗೂ ಅವರ ನಾಯಕರ ವಿರುದ್ಧ ಅಪಪ್ರಚಾರ ನಡೆಯಿತು ಎಂದು ಆರೋಪಿಸಿದರು. "ಸಮುದಾಯವು ಕಾಂಗ್ರೆಸ್ ಪಕ್ಷವನ್ನು ಕೈಬಿಟ್ಟಿದೆ ಎಂಬ ಭ್ರಮೆ ಸೃಷ್ಟಿಸಲು ಪ್ರಯತ್ನಿಸಲಾಯಿತು.

ಆದರೆ ಫಲಿತಾಂಶವು ಕಾಂಗ್ರೆಸ್ ಜಯಭೇರಿ ಬಾರಿಸಿರುವುದನ್ನು ತೋರಿಸಿದೆ. ಈ ಜಯದಲ್ಲಿ ಅಲ್ಪಸಂಖ್ಯಾತರ ಪಾತ್ರ ಮಹತ್ವದ್ದಾಗಿದೆ" ಎಂದು ಹೇಳಿದ್ದಾರೆ. ಅಲ್ಪಸಂಖ್ಯಾತರು ಪ್ರತಿಫಲಾಪೇಕ್ಷೆಯಿಲ್ಲದೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದಿದ್ದಾರೆ. ಆದರೆ ಫಲಿತಾಂಶದ ಮೊದಲು ನಾಯಕರೊಂದಿಗೆ ನಡೆದ ವರ್ತನೆ ಸಮುದಾಯದ ಮನಸ್ಸಿಗೆ ನೋವುಂಟುಮಾಡಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಕಾಂಗ್ರೆಸ್ ಹೈಕಮಾಂಡ್ ತನ್ನ ನಿಲುವನ್ನು ಸ್ಪಷ್ಟಪಡಿಸಿ, ಸಮುದಾಯದ ಮುಂದೆ ಕ್ಷಮೆ ಕೋರುವಂತೆ ಅವರು ಆಗ್ರಹಿಸಿದ್ದು.

"ನಂಬಿಕೆ ಪ್ರಜಾಪ್ರಭುತ್ವದ ಮೂಲಸ್ತಂಭ. ಅದನ್ನು ಕಾಪಾಡುವುದು ಅಗತ್ಯ" ಎಂದರು.

"ಸಮುದಾಯಗಳನ್ನು ಅನುಮಾನದಿಂದ ನೋಡುವುದು ನಾಯಕತ್ವದ ಗುಣವಲ್ಲ. ಹೊಸ ನಾಯಕತ್ವವು ಪಕ್ಷ ಮತ್ತು ಸಮುದಾಯಕ್ಕೆ ನ್ಯಾಯ ಒದಗಿಸಬೇಕು" ಎಂದು ಅವರು ಹೇಳಿದ್ದಾರೆ.

> "ಪಕ್ಷದೊಳಗಿನ ಭಿನ್ನಮತವನ್ನು ಸಮರ್ಥವಾಗಿ ನಿಭಾಯಿಸಲು ವಿಫಲರಾಗಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ನೈತಿಕ ಹೊಣೆ ಹೊತ್ತು ತಕ್ಷಣ ರಾಜೀನಾಮೆ ನೀಡಬೇಕು"
>
> –ಮಹ್ಮದಶಫಿ ನಾಗರಕಟ್ಟೆ

**ಯೋಗಿ ಆಡಳಿತ ಇತರ ರಾಜ್ಯಗಳಿಗೆ ಮಾದರಿ। ಉತ್ತರ ಪ್ರದೇಶದ ಆರ್ಥಿಕ ಶಿಸ್ತು ಶ್ಲಾಘಿಸಿದ ಸಂತೋಷ ಅಕ್ಕಿ**

## ಗದಗಕ್ಕೆ 24X7 ನೀರು ಪೂರೈಸಿ

■ವಿಜಯಸಾಕ್ಷಿ ಸುದ್ದಿ, ಗದಗ



ದೇಶದ ಅತಿದೊಡ್ಡ ರಾಜ್ಯವಾದ ಉತ್ತರ ಪ್ರದೇಶವು ಆರ್ಥಿಕ ಶಿಸ್ತು ಮತ್ತು ಪಾರದರ್ಶಕ ಆಡಳಿತದ ಮೂಲಕ ಇತರ ರಾಜ್ಯಗಳಿಗೆ ಮಾದರಿಯಾಗಿದೆ ಎಂದು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಹೇಳಿದ್ದಾರೆ.

ಸಿಎಂ ಯೋಗಿ ಆದಿತ್ಯನಾಥ್ ಅವರ ನಾಯಕತ್ವದಲ್ಲಿ ಉತ್ತರ ಪ್ರದೇಶದಲ್ಲಿ ನಡೆದಿರುವ ಆರ್ಥಿಕ ಪ್ರಗತಿಯನ್ನು ಅವರು ಶ್ಲಾಘಿಸಿದರು. ಸುಮಾರು ರೂ. 42,000 ಕೋಟಿ ವೆಚ್ಚದ ಗಂಗಾ ಎಕ್ಸ್‌ಪ್ರೆಸ್‌ವೇ ಯೋಜನೆಯನ್ನು ಯಾವುದೇ ಬ್ಯಾಂಕ್ ಸಾಲವಿಲ್ಲದೆ ರಾಜ್ಯದ ಸ್ವಂತ ಸಂಪನ್ಮೂಲಗಳಿಂದ ನಿರ್ಮಿಸಿರುವುದು ಐತಿಹಾಸಿಕ ಸಾಧನೆ ಎಂದರು.

2017ರಿಂದ ಉತ್ತರ ಪ್ರದೇಶದ ಆರ್ಥಿಕತೆ, ಬಜೆಟ್ ಗಾತ್ರ ಹಾಗೂ ತಲಾ ಆದಾಯ ಮೂರು ಪಟ್ಟು ಹೆಚ್ಚಾಗಿದೆ. ರಾಜ್ಯವು ಕಂದಾಯ ಮಿಗುತೆಯನ್ನು ಸಾಧಿಸಿದ್ದು, ಹಣಕಾಸು ಶಿಸ್ತು ಮತ್ತು ಪಾರದರ್ಶಕ ಆಡಿಟ್ ವ್ಯವಸ್ಥೆಯಿಂದ ಸಾರ್ವಜನಿಕ ಹಣದ ದುರುಪಯೋಗ ಕಡಿಮೆಯಾಗಿದೆ ಎಂದು ಅವರು ಹೇಳಿದರು. ಮೆರಿಟ್ ಆಧಾರಿತ ನೇಮಕಾತಿ ಹಾಗೂ ಎಂಎಸ್‌ಎಂಇ ವಲಯದ ಬೆಳವಣಿಗೆಯಿಂದ ಯುವಜನತೆಗೆ ಹೊಸ ಅವಕಾಶಗಳು ಸಿಕ್ಕಿವೆ ಎಂದರು.

ಇದೇ ವೇಳೆ ಕರ್ನಾಟಕದ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ಟೀಕೆ ವ್ಯಕ್ತಪಡಿಸಿದ ಅವರು, ಉಚಿತ ಯೋಜನೆಗಳ ಹೊರೆಯಿಂದ ರಾಜ್ಯ ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದೆ ಎಂದು ಆರೋಪಿಸಿದರು. ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಕೊರತೆ ಎದುರಾಗುತ್ತಿದ್ದು, ಭ್ರಷ್ಟಾಚಾರದ ಆರೋಪಗಳು ಯುವಜನತೆಯ ಭವಿಷ್ಯವನ್ನು ಹಾನಿಗೊಳಿಸುತ್ತಿವೆ ಎಂದರು.

ಇಂದಿನ ಸ್ಥಳೀಯ ಜನಪ್ರತಿನಿಧಿಗಳು ಜನರ ಮೂಲಭೂತ ಅಗತ್ಯಗಳನ್ನು ಪೂರೈಸುವಲ್ಲಿ ವಿಫಲವಾಗಿದ್ದಾರೆ ಎಂದು ಆರೋಪಿಸಿದ ಅವರು, ಉತ್ತರ ಪ್ರದೇಶದ ಮಾದರಿಯಂತೆ ಆಡಳಿತಾತ್ಮಕ ಇಚ್ಛಾಶಕ್ತಿ ಪ್ರದರ್ಶಿಸಿ ಜನರ ಸಮಸ್ಯೆಗಳನ್ನು ತಕ್ಷಣ ಪರಿಹರಿಸಬೇಕು ಎಂದು ಆಗ್ರಹಿಸಿದ್ದಾರೆ.

> ಗದಗ ನಗರದ ಜನತೆಗೆ ಅತ್ಯಗತ್ಯವಾಗಿರುವ 24ಥ7 ನಿರಂತರ ಕುಡಿಯುವ ನೀರಿನ ಯೋಜನೆ ದಶಕಗಳಿಂದ ನೆನೆಗುದಿಗೆ ಬಿದ್ದಿರುವುದು ಆಡಳಿತದ ವೈಫಲ್ಯಕ್ಕೆ ಉದಾಹರಣೆ ಎಂದು ಹೇಳಿದರು.

**ಶಕ್ತಿ ದೇವತೆ ದ್ಯಾಮಮ್ಮ– ದುರ್ಗಾದೇವಿ ಜಾತ್ರೆ ಸಂಭ್ರಮ – ಪಾದರಕ್ಷೆ, ಮನೆ ಅಡುಗೆಗೆ ನಿಷೇಧ; ನಿಯಮ ಉಲ್ಲಂಘನೆಗೆ ರೂ. 500 ದಂಡ**

# 18 ವರ್ಷಗಳ ಬಳಿಕ ಬೆನಕನಕೊಪ್ಪ ಜಾತ್ರೆ ಬಲು ಜೋರು

■ವಿಜಯಸಾಕ್ಷಿ ಸುದ್ದಿ, ನರಗುಂದ

ನರಗುಂದ ತಾಲೂಕಿನ ಬೆನಕನಕೊಪ್ಪ ಗ್ರಾಮದಲ್ಲಿ 18 ವರ್ಷಗಳ ಬಳಿಕ ನಡೆಯುತ್ತಿರುವ ಗ್ರಾಮದ ಶಕ್ತಿ ದೇವತೆ ದ್ಯಾಮಮ್ಮ ಹಾಗೂ ದುರ್ಗಾದೇವಿ ಜಾತ್ರೆ ಭಕ್ತಿಭಾವ ಹಾಗೂ ಸಂಭ್ರಮದ ಮೇಳವಾಗಿ ಮಾರ್ಪಟ್ಟಿದೆ.

ಐದು ದಿನಗಳ ಕಾಲ ನಡೆಯುವ ಈ ಜಾತ್ರೆಯಲ್ಲಿ ಗ್ರಾಮದಲ್ಲಿ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೆ ತರಲಾಗಿದೆ. ಯಾವುದೇ ಮನೆಯಲ್ಲಿ ಅಡುಗೆ ಮಾಡುವಂತಿಲ್ಲ. ಗ್ರಾಮದಲ್ಲಿ ಯಾರೂ ಪಾದರಕ್ಷೆ ಧರಿಸುವಂತಿಲ್ಲ. ನಿಯಮ ಉಲ್ಲಂಘಿಸಿದರೆ ರೂ. 500 ದಂಡ ವಿಧಿಸಲಾಗುತ್ತಿದೆ.

ಜಾತ್ರೆಯ ಅಂಗವಾಗಿ ವಾದ್ಯ, ಕುಂಭಮೇಳದೊಂದಿಗೆ ಅದ್ದೂರಿ ಪಲ್ಲಕ್ಕಿ ಮೆರವಣಿಗೆ ನಡೆಸಲಾಯಿತು. ಮೆರವಣಿಗೆ ಉದ್ದಕ್ಕೂ ಭಂಡಾರ ಎರೆಚುವ ಮೂಲಕ ಸಂಭ್ರಮಿಸಲಾಯಿತು. ಸುಮಾರು 50 ಕ್ವಿಂಟಾಲ್ ಭಂಡಾರವನ್ನು ಜಾತ್ರೆಗೆ ತರಲಾಗಿದ್ದು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಭಂಡಾರದ ಜಾತ್ರೆಯನ್ನು ಸಂಭ್ರಮದಿಂದ ಆಚರಿಸಿದರು.



> "ಶಕ್ತಿ ದೇವತೆಯ ಜಾತ್ರೆಯಲ್ಲಿ ಭಾಗವಹಿಸುವುದು ನಮಗೆ ಭಕ್ತಿ ಹಾಗೂ ಸಂತೋಷ ಎರಡನ್ನೂ ನೀಡುತ್ತದೆ"
>
> – ವಿದ್ಯಾ, ಭಕ್ತೆ

> "ಜಾತ್ರೆ ನಮ್ಮ ಸಂಪ್ರದಾಯದ ಭಾಗ; ನಾವು ಎಲ್ಲೇ ಇದ್ದರೂ ತವರು ಊರಿಗೆ ಬಂದು ದೇವಿಗೆ ಪೂಜೆ ಸಲ್ಲಿಸುತ್ತೇವೆ"
>
> – ಡಾ. ಶ್ವೇತಾ, ಭಕ್ತೆ

ವಿಶೇಷವಾಗಿ ಯುವಕರು ಡಿಜೆ ಸೌಂಡ್‌ಗೆ ಭಂಡಾರ ಎರೆಚುತ್ತಾ ಭರ್ಜರಿ ನೃತ್ಯ ಪ್ರದರ್ಶಿಸಿ ಜಾತ್ರೆಯ ರಂಗನ್ನು ಮತ್ತಷ್ಟು ಹೆಚ್ಚಿಸಿದರು.

ಜಾತ್ರೆಯ ಸಂದರ್ಭದಲ್ಲಿ ಹೆಣ್ಣು ಮಕ್ಕಳು ತಮ್ಮ ತವರು ಮನೆಗೆ ಆಗಮಿಸಿ ದೇವಿಗೆ ಪೂಜೆ ಸಲ್ಲಿಸುವುದು ಪ್ರಮುಖ ಸಂಪ್ರದಾಯವಾಗಿದೆ.

> "18 ವರ್ಷಗಳ ನಂತರ ಜಾತ್ರೆ ನಡೆಯುತ್ತಿರುವುದು ಗ್ರಾಮಕ್ಕೆ ವಿಶೇಷ; ಸಂಪ್ರದಾಯದಂತೆ ಎಲ್ಲರೂ ಪಾಲ್ಗೊಳ್ಳುತ್ತಿದ್ದಾರೆ"
>
> – ದೇಸಾಯಿಗೌಡ, ಗ್ರಾಮದ ಹಿರಿಯರು

ಅವರು ಎಲ್ಲೇ ಇದ್ದರೂ ಈ ಜಾತ್ರೆಗೆ ಆಗಮಿಸಿ ಉಡಿ ತುಂಬುವ ಮೂಲಕ ದೇವಿಗೆ ಭಕ್ತಿ ಅರ್ಪಿಸುತ್ತಾರೆ.

ಭಕ್ತರು ತಮ್ಮ ಇಷ್ಟಾರ್ಥಗಳು ನೆರವೇರಲೆಂದು ಶಕ್ತಿ ದೇವತೆಗೆ ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ. ಉತ್ತಮ ಮಳೆ ಹಾಗೂ ಸಮೃದ್ಧ ಬೆಳೆಗಾಗಿ ದೇವಿಯನ್ನು ಬೇಡಿಕೊಳ್ಳುತ್ತಿದ್ದಾರೆ.

ಗ್ರಾಮದಲ್ಲಿ ಮನೆಗಳಲ್ಲಿ ಅಡುಗೆ ನಿಷೇಧ ಇರುವುದರಿಂದ ಭಕ್ತರಿಗಾಗಿ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಮುಂಜಾನೆ ಉಪಹಾರ, ಮಧ್ಯಾಹ್ನ ಮತ್ತು ರಾತ್ರಿ ಊಟದ ವ್ಯವಸ್ಥೆಯನ್ನು ಜಾತ್ರಾ ಸಮಿತಿ ಮಾಡಿದ್ದು, ಎಲ್ಲರೂ ಅದರ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ.

ಜಾತ್ರಾ ಸಮಿತಿ ಕಟ್ಟುನಿಟ್ಟಿನ ನಿಯಮಗಳನ್ನು ಪಾಲಿಸುವಂತೆ ಸೂಚಿಸಿದ್ದು, ಗ್ರಾಮಸ್ಥರು ಹಾಗೂ ಭಕ್ತರು ನಿಯಮಾನುಸಾರವಾಗಿ ಜಾತ್ರೆಯಲ್ಲಿ ಭಾಗವಹಿಸುತ್ತಿದ್ದಾರೆ.

# ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಜಯ: ಕಾರ್ಯಕರ್ತರ ವಿಜಯೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ 194 ಕ್ಷೇತ್ರಗಳಲ್ಲಿ ಬಹುಮತ ಸಾಧಿಸಿದ ಹಿನ್ನೆಲೆಯಲ್ಲಿ ನಗರದ ಹುಯಿಲಗೋಳ ನಾರಾಯಣರಾವ್ ವೃತ್ತದಲ್ಲಿ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಪಶ್ಚಿಮ ಬಂಗಾಳದ ಮತದಾರರು ಮೊದಲ ಬಾರಿಗೆ ಬಿಜೆಪಿ ಪಕ್ಷಕ್ಕೆ ಸ್ಪಷ್ಟ ಬಹುಮತ ನೀಡಿದ್ದು, ಈ ಮೂಲಕ ಪಕ್ಷ ಅಧಿಕಾರಕ್ಕೆ ಏರಲಿದೆ ಎಂದು ಬಿಜೆಪಿ ಮುಖಂಡರು ಹೇಳಿದರು. ಈ ಅಭೂತಪೂರ್ವ ಗೆಲುವಿಗೆ ಮತದಾರರು ಆಶೀರ್ವಾದ ನೀಡಿದ್ದು, ಮಮತಾ ಬ್ಯಾನರ್ಜಿ ನೇತೃತ್ವದ ಆಡಳಿತವನ್ನು ತಿರಸ್ಕರಿಸಿದ್ದಾರೆ ಎಂದು ಅವರು ಅಭಿಪ್ರಾಯಪಟ್ಟರು.



ಹಿಂದಿನ ಚುನಾವಣಾ ಅಂಕಿ–ಅಂಶಗಳನ್ನು ಉಲ್ಲೇಖಿಸಿದ ಅವರು, 2016ರಲ್ಲಿ ಬಿಜೆಪಿ ಕೇವಲ 3 ಸ್ಥಾನಗಳನ್ನು ಗೆದ್ದಿದ್ದರೆ, 2021ರಲ್ಲಿ 77 ಸ್ಥಾನಗಳನ್ನು ಪಡೆದಿತ್ತು. ಈಗ 2026ರಲ್ಲಿ 194 ಸ್ಥಾನಗಳಲ್ಲಿ ಜಯ ಸಾಧಿಸಿರುವುದು ಪಕ್ಷದ ಬೆಳವಣಿಗೆಯ ಸಾಕ್ಷಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಎಂ.ಎಸ್. ಕರೀಗೌಡ್ರ, ಎಂ.ಎನ್. ಹಿರೇಮಠ, ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಜಗನ್ನಾಥ ಭಾಂಡಗೆ, ಸಿದ್ದು ಪಲ್ಲೇದ, ಬಿ.ಎಸ್. ಚಿಂಚಲಿ, ವಿಜಯಕುಮಾರ ಗಡ್ಡಿ, ನಿಂಗಪ್ಪ ಹುಗ್ಗಿ, ಶಂಕರ ಕಾಕಿ, ಸುರೇಶ ಚಿತ್ತರಗಿ, ಚಂದ್ರು ತಡಸದ, ಮಂಜುನಾಥ ಹಳ್ಳೂರಮಠ, ಅಮರನಾಥ ಗಡಗಿ, ಕೆ.ಪಿ. ಕೋಟಿಗೌಡ್ರ, ನಿರ್ಮಲಾ ಕೊಳ್ಳಿ, ಸ್ವಾತಿ ಅಕ್ಕಿ, ರೇಖಾ ಗೌಳಿ, ಚನ್ನಮ್ಮ ಹುಳಕಣ್ಣವರ, ಕಮಲಾಕ್ಷಿ ಅಂಗಡಿ, ವಿಜಯಲಕ್ಷ್ಮೀ ಮಾನ್ವಿ, ಸಂಜೀವ ಖಟವಟೆ, ರಮೇಶ್ ಸಜ್ಜಗಾರ, ರವಿ ಮಾನ್ವಿ, ವಿರೇಶ್ ಗದಗಿನ, ವಿನಾಯಕ ಹೊರಕೇರಿ, ಗಂಗಾಧರ ಮೇಲಗಿರಿ, ಸಂತೋಷ ಐಲಿ, ಹುಲಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಶಿಕ್ಷಕರ ಸಂಘದ ಚುನಾವಣೆಯಲ್ಲಿ ಟಿ. ಸೋಮಶೇಖರ್ ಭರ್ಜರಿ ಜಯ

■ವಿಜಯಸಾಕ್ಷಿ ಸುದ್ದಿ,ಹಗರಿಬೊಮ್ಮನಹಳ್ಳಿ

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾದಟಿ. ಸೋಮಶೇಖರ್ ಅವರು ಗಮನಾರ್ಹ ಗೆಲುವು ಸಾಧಿಸಿದ್ದಾರೆ.

ಈ ಚುನಾವಣೆಯಲ್ಲಿ ಶಿಕ್ಷಕರ ವಿಶ್ವಾಸ ಮತ್ತು ಬೆಂಬಲವನ್ನು ಪಡೆದುಕೊಂಡ ಸೋಮಶೇಖರ್ ಅವರು ತಮ್ಮ ಪ್ರತಿಸ್ಪರ್ಧಿಗಳನ್ನು ಹಿನ್ನಡೆಗೊಳಿಸಿ ಸ್ಪಷ್ಟ ಬಹುಮತದಿಂದ ಜಯಶಾಲಿಯಾಗಿದ್ದಾರೆ. ಫಲಿತಾಂಶ ಪ್ರಕಟವಾದ ತಕ್ಷಣ ಅವರ ಬೆಂಬಲಿಗರು ಸಂತೋಷ ವ್ಯಕ್ತಪಡಿಸಿ ವಿಜಯೋತ್ಸವ ಆಚರಿಸಿದರು.




ಶಿಕ್ಷಕರ ಹಿತಾಸಕ್ತಿ, ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವುದು ಹಾಗೂ ಸಂಘದ ಅಭಿವೃದ್ಧಿಗೆ ತಾವು ಬದ್ಧರಾಗಿರುವುದಾಗಿ ಟಿ. ಸೋಮಶೇಖರ್ ತಿಳಿಸಿದ್ದಾರೆ.

ಪಕ್ಷೇತರ ಅಭ್ಯರ್ಥಿಯಾದ ಸೋಮಶೇಖರ್ ಅವರ ಗೆಲುವು ಶಿಕ್ಷಕರ ನಿಜವಾದ ಆಶಯಗಳ ಪ್ರತಿಫಲವಾಗಿದೆ ಎಂದು ಪುರಸಭೆ ಮಾಜಿ ಸದಸ್ಯ ಲಕ್ಷ್ಮಣ್ ಕಲಾಲ್ ಅಭಿಪ್ರಾಯಪಟ್ಟರು.

"ಈ ಚುನಾವಣೆಯಲ್ಲಿ ಶಿಕ್ಷಕರು ಯಾವುದೇ ಪಕ್ಷಪಾತವಿಲ್ಲದೆ ತಮ್ಮ ಸ್ವತಂತ್ರ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಸೋಮಶೇಖರ್ ಅವರ ಪ್ರಾಮಾಣಿಕತೆ, ಸರಳತೆ ಹಾಗೂ ಶಿಕ್ಷಕರ ಸಮಸ್ಯೆಗಳ ಬಗ್ಗೆ ಇರುವ ಬದ್ಧತೆ ಅವರಿಗೆ ಈ ರ್ಜರಿ ಗೆಲುವು ತಂದುಕೊಟ್ಟಿದೆ. ಮುಂದಿನ ದಿನಗಳಲ್ಲಿ ಅವರು ಸಂಘವನ್ನು ಇನ್ನಷ್ಟು ಬಲಿಷ್ಠಗೊಳಿಸಿ ಶಿಕ್ಷಕರ ಹಕ್ಕುಗಳಿಗಾಗಿ ಪರಿಣಾಮಕಾರಿಯಾಗಿ ಕೆಲಸ ಮಾಡಲಿದ್ದಾರೆ ಎಂಬ ವಿಶ್ವಾಸ ನಮಗಿದೆ," ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಸಂಪತ್ ಮರ್ತಿ, ಈಶ, ನವೀನ್, ರಾಜು, ಪ್ರದೀಪ್, ಅಶೋಕ್ ಸೇರಿದಂತೆ ಅನೇಕ ಶಿಕ್ಷಕರು ಉಪಸ್ಥಿತರಿದ್ದರು.

**ಅಣ್ಣಿಗೇರಿ ಆಶ್ರಮದಲ್ಲಿ ನಡೆದ ಆಧ್ಯಾತ್ಮಿಕ–ಶೈಕ್ಷಣಿಕ ಚಿಂತನ ಮಾಲಿಕೆಯಲ್ಲಿ ಎಸ್.ಜಿ. ಪಲ್ಲೇದ ಅಭಿಮತ**

# ಶಿಕ್ಷಣ ವ್ಯಕ್ತಿಯನ್ನು ಉನ್ನತ ಸ್ಥಾನಕ್ಕೇರಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಿ.ಜಿ. ಅಣ್ಣಿಗೇರಿ ಆಶ್ರಮದಲ್ಲಿ ನಡೆದ ಆಧ್ಯಾತ್ಮಿಕ ಮತ್ತು ಶೈಕ್ಷಣಿಕ ಚಿಂತನ ಮಾಲಿಕೆ ಕಾರ್ಯಕ್ರಮದಲ್ಲಿ ಶಿಕ್ಷಣವು ವ್ಯಕ್ತಿತ್ವ ವಿಕಸನಗೊಳಿಸಿ ವ್ಯಕ್ತಿಯನ್ನು ಉನ್ನತ ಸ್ಥಾನಕ್ಕೇರಿಸುವ ಶಕ್ತಿಯಾಗಿದೆ ಎಂದು ನಿವೃತ್ತ ಜಿಲ್ಲಾ ನ್ಯಾಯಾಧೀಶ ಹಾಗೂ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಎಸ್.ಜಿ. ಪಲ್ಲೇದ ಹೇಳಿದರು.

ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕಲಿಯುವ ವಯಸ್ಸಿನಲ್ಲಿ ಶ್ರದ್ಧೆ, ಸಂಯಮ, ಶಿಸ್ತು ಹಾಗೂ ಸಮಯ ಪಾಲನೆ ಅತ್ಯಂತ ಅಗತ್ಯವೆಂದು ಹೇಳಿದರು. ಪರಿಶ್ರಮದ ಅಧ್ಯಯನ ಭವಿಷ್ಯದಲ್ಲಿ ಉತ್ತಮ ಫಲ ನೀಡುತ್ತದೆ ಎಂದರು.

ಡಿಡಿಪಿಐ ಆರ್.ಎಸ್. ಬುರಡಿ ಮಾತನಾಡಿ, ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಉತ್ತಮವಾಗಿ ಬರಲು ಶಿಕ್ಷಕರ ಪರಿಶ್ರಮ ಮತ್ತು ವಿದ್ಯಾರ್ಥಿಗಳ ನಿರಂತರ ಓದು ಕಾರಣವಾಗಿದೆ ಎಂದರು. ಅಣ್ಣಿಗೇರಿ ಆಶ್ರಮವು ಗದಗ ಪ್ರದೇಶದ ಶೈಕ್ಷಣಿಕ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದೆ ಎಂದು ಶ್ಲಾಘಿಸಿದರು.

ಈ ಆಶ್ರಮದಲ್ಲಿ ವಿದ್ಯಾರ್ಥಿಗಳು ಶೈಕ್ಷಣಿಕ ವರ್ಷ ಆರಂಭಕ್ಕೂ ಮುನ್ನವೇ ಕಲಿಕೆಯನ್ನು ಆರಂಭಿಸುತ್ತಿರುವುದು ವಿಶೇಷವಾಗಿದ್ದು, ಶಾಲಾ ಶಿಕ್ಷಣದಲ್ಲಿ ಇನ್ನಷ್ಟು ಉತ್ತಮತೆ ಸಾಧಿಸಲು ಸಹಕಾರಿ ಆಗುತ್ತಿದೆ ಎಂದರು.



ನಿವೃತ್ತ ಪ್ರಾಚಾರ್ಯ ಡಾ. ಉಮೇಶ ಪುರದ, ಜಿಮ್ಸ್ ವೈದ್ಯಾಧಿಕಾರಿ ಡಾ. ಅರವಿಂದ ಹಾಗೂ ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಲಕ್ಷ್ಮಣ ಜೋಗದಂಡಕರ ಅವರು ಆಶ್ರಮದ ಸೇವೆಯನ್ನು ಪ್ರಶಂಸಿಸಿದರು. ಅಣ್ಣಿಗೇರಿ ಗುರುಗಳ ನಂತರ ಶಿಷ್ಯವೃಂದ ಆಶ್ರಮದ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುತ್ತಿದ್ದು, ಜ್ಞಾನದಾಸೋಹವನ್ನು ಮುಂದುವರಿಸಿರುವುದು ಅಭಿನಂದನೀಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಮಾತನಾಡಿ, ಆಶ್ರಮದಲ್ಲಿ ವಿದ್ಯಾಭ್ಯಾಸ ಮಾಡಿದ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 86 ರಿಂದ 97.76 ಅಂಕ ಗಳಿಸಿರುವುದು ಹೆಮ್ಮೆಯ ವಿಷಯ ಎಂದರು. ಉಳಿದ ವಿದ್ಯಾರ್ಥಿಗಳು ಪ್ರಥಮ ಮತ್ತು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿರುವುದನ್ನು ತಿಳಿಸಿದರು.

> "ಬರಲಿರುವ ಶೈಕ್ಷಣಿಕ ವರ್ಷದಲ್ಲೂ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ ಫಲಿತಾಂಶವನ್ನು ಇನ್ನಷ್ಟು ಉತ್ತಮಪಡಿಸಲಾಗುವುದು"
>
> – ಆರ್.ಎಸ್. ಬುರಡಿ, ಡಿಡಿಪಿಐ

ಆಶ್ರಮದಲ್ಲಿ ಜ್ಞಾನದಾಸೋಹ ನಿರಂತರವಾಗಿ ನಡೆಯುತ್ತಿದ್ದು, ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದರು. ಮಕ್ಕಳಿಗೆ ದಾಸೋಹ ಸೇವೆ ನೀಡಿದ ಪ್ರಸನ್ನ ಅರಳಿ ಹಾಗೂ ಅತಿಥಿಗಳನ್ನು ಸನ್ಮಾನಿಸಲಾಯಿತು.

ವಿದ್ಯಾರ್ಥಿಗಳು ಪ್ರಾರ್ಥನೆ ಸಲ್ಲಿಸಿದರು. ಮಂಜುಳಾ ತುಮ್ಮರಮಟ್ಟಿ ಸ್ವಾಗತಿಸಿ ನಿರೂಪಿಸಿದರು. ಶಿವಪ್ಪ ಕಟ್ಟಿ ವಂದಿಸಿದರು.

ಈ ಸಂದರ್ಭದಲ್ಲಿ ಸಿದ್ದಣ್ಣ ಕವಲೂರ, ಆಂಜನೇಯ ಕಟಗಿ, ತೋಂಟೇಶ ವೀರಲಿಂಗಯ್ಯನಮಠ, ರವಿ ದಂಡಿನ, ಡಾ. ಚನ್ನಪ್ಪಗೌಡ್ರ, ಡಾ. ಬಸಯ್ಯ ಬೆಳ್ಳೇರಿಮಠ, ಸುಭಾಷ್ ಚಂದ್ರ ಬೆಟ್ಟದೂರ, ಗುರುರಾಜ ಅಣ್ಣಿಗೇರಿ ಸೇರಿದಂತೆ ಆಶ್ರಮದ ಶಿಕ್ಷಕರು ಮತ್ತು ಗಣ್ಯರು ಉಪಸ್ಥಿತರಿದ್ದರು.

### ಮೂರು ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಜಯ: ಜನಾಭಿಪ್ರಾಯಕ್ಕೆ ಪ್ರತಿಫಲ ಸುರೇಶ್ ಮರಳಪ್ಪನವರ

# ಅಭಿವೃದ್ಧಿಗೆ ಜನಮತದ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಗದಗ



ಐದು ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಪಶ್ಚಿಮ ಬಂಗಾಳ, ಆಸ್ಸಾಂ ಹಾಗೂ ಪುದಚೇರಿ ರಾಜ್ಯಗಳಲ್ಲಿ ಭಾರತೀಯ ಜನತಾ ಪಕ್ಷ ಮತ್ತು ಎನ್‌ಡಿಎ ಮೈತ್ರಿಗೆ ದೊರೆತ ಅಭೂತಪೂರ್ವ ಜಯಕ್ಕೆ ಮತದಾರರಿಗೆ ಹಾಗೂ ಪಕ್ಷದ ಕಾರ್ಯಕರ್ತರಿಗೆ ಅಭಿನಂದನೆಗಳನ್ನು ಗದಗ ನಗರ ಮಂಡಲ ಅಧ್ಯಕ್ಷರಾದ ಸುರೇಶ್ ಮರಳಪ್ಪನವರ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿದ ಅವರು, "ಸೋಲು-ಗೆಲುವು ಪ್ರಜಾಪ್ರಭುತ್ವದ ವ್ಯವಸ್ಥೆಯ ಒಂದು ಭಾಗವಾಗಿದ್ದು, ಅದನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ. ಪ್ರಜಾಪ್ರಭುತ್ವದ ಮೇಲೆ ನಂಬಿಕೆ ಇಟ್ಟ ಮತದಾರರು ಈ ಬಾರಿ ಬಿಜೆಪಿಗೆ ಆಶೀರ್ವಾದ ನೀಡಿದ್ದಾರೆ" ಎಂದು ಹೇಳಿದರು. ದೇಶದ ಜನತೆ ಬಿಜೆಪಿ ಸಿದ್ಧಾಂತ, ಅಭಿವೃದ್ಧಿ ಕಾರ್ಯಗಳು ಹಾಗೂ ಸ್ಥಿರ ಆಡಳಿತವನ್ನು ಮೆಚ್ಚಿ ಪಕ್ಷವನ್ನು ಆಯ್ಕೆ ಮಾಡುತ್ತಿರುವುದು ಸ್ಪಷ್ಟವಾಗಿದೆ. "ದೇಶ ಮೊದಲು  ಪಕ್ಷ ನಂತರ" ಎಂಬ ತತ್ವದ ಮೇಲೆ ಕಾರ್ಯಕರ್ತರು ಸೇವೆ ಸಲ್ಲಿಸುತ್ತಿದ್ದು, ಬಿಜೆಪಿ ದೇಶದ ಅತಿ ದೊಡ್ಡ ಸದಸ್ಯತ್ವ ಹೊಂದಿರುವ ಪಕ್ಷವಾಗಿದೆ ಎಂದು ಅವರು ತಿಳಿಸಿದ್ದಾರೆ. ದೇಶದ ದೀನದಲಿತರು, ಬಡವರು, ರೈತರು ಮತ್ತು ಕಾರ್ಮಿಕರ ಸಮಗ್ರ ಅಭಿವೃದ್ಧಿಯೇ ಬಿಜೆಪಿಯ ಗುರಿಯಾಗಿದ್ದು, ವೋಟ್ ಬ್ಯಾಂಕ್ ರಾಜಕೀಯಕ್ಕೆ ಒಲಿದು ಆಡಳಿತ ನಡೆಸುವುದಿಲ್ಲ. ಬದಲಾಗಿ, ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಅವರು ಹೇಳಿದ್ದಾರೆ. ಮೋದಿ ಸರ್ಕಾರ ಜಾರಿಗೆ ತಂದ ಆಯುಷ್ಮಾನ್ ಭಾರತ ಆರೋಗ್ಯ ಯೋಜನೆ, ಜನಔಷಧಿ ಕೇಂದ್ರಗಳು, ಕಿಸಾನ್ ಸಮ್ಮಾನ್ ನಿಧಿ, ಜಲ್ ಜೀವನ ಮಿಷನ್, ಬೇಟಿ ಬಚಾವೋ-ಬೇಟಿ ಪಡಾವೋ, ತ್ರಿಪಲ್ ತಲಾಕ್ ರದ್ದು, ಆರ್ಟಿಕಲ್ 370 ರದ್ದು, ಸೌರಶಕ್ತಿ ಉತ್ತೇಜನ, ರಸ್ತೆ ಮತ್ತು ರೈಲು ಅಭಿವೃದ್ಧಿ ಸೇರಿದಂತೆ ಅನೇಕ ಯೋಜನೆಗಳು ದೇಶದ ಅಭಿವೃದ್ಧಿಗೆ ದಿಕ್ಕು ತೋರಿವೆ ಎಂದು ಅವರು ಅಭಿಪ್ರಾಯಪಟ್ಟರು. ಮುಂದಿನ ದಿನಗಳಲ್ಲಿ ಉಳಿದ ರಾಜ್ಯಗಳಲ್ಲಿಯೂ ಕಮಲ ಅರಳುವುದು ಖಚಿತವಾಗಿದ್ದು, ವಿಕಸಿತ ಭಾರತದ ಕನಸು ಸಾಕಾರವಾಗಲಿದೆ ಎಂದು ಸುರೇಶ್ ಮರಳಪ್ಪನವರ ವಿಶ್ವಾಸ ವ್ಯಕ್ತಪಡಿಸಿದರು.

### ರಾಜ್ಯ ಮಟ್ಟದ ಸಾಹಿತ್ಯ ಸಮ್ಮೇಳನದಲ್ಲಿ ಕವಿಗೋಷ್ಠಿ: ನುಡಿ ಸಡಗರಕ್ಕೆ ಸಾಥ್..!

# ಪ್ರಚಲಿತ ವಿಷಯಗಳ ಮೇಲೆ ಬೆಳಕು ಚೆಲ್ಲುವ ಕವಿತೆಗಳ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಚಲಿತ ವಿದ್ಯಮಾನಗಳ ಮೇಲೆ ಬೆಳಕು ಚೆಲ್ಲುವ ಕವಿತೆಗಳು ಹೊರಹೊಮ್ಮಬೇಕು. ವಾಸ್ತವಿಕ ಬದುಕಿಗೆ ಹತ್ತಿರವಾಗುವ ಕವಿತೆಗಳು ಜನಮನ ಸೆಳೆಯಬಲ್ಲವು. ಅಂತಹ ಕವಿತೆಗಳ ರಚನೆಗೆ ಯುವ ಬರಹಗಾರರು ಮುಂದಾಗಬೇಕು ಎಂದು ಸಾಹಿತಿ ಶ್ರೀಮತಿ ಶಿವಶಾಂತಾ ಬಿಸನಳ್ಳಿ ಹೇಳಿದರು.



ನಗರದ ಲಾಯನ್ಸ್ ಭವನದಲ್ಲಿ ಕರ್ನಾಟಕ ರಾಜ್ಯ ಲೇಖಕಿಯರ ಸಂಘ ಗದಗ ಜಿಲ್ಲಾ ಘಟಕ, ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ ಗದಗ ಜಿಲ್ಲಾ ಘಟಕ, ಧಾರವಾಡದ ಚೇತನ ಫೌಂಡೇಶನ್ ಹಾಗೂ ಬೆಂಗಳೂರಿನ ಗಂಧದ ಗುಡಿ ಕನ್ನಡ ಸಂಘಗಳ ಸಹಯೋಗದಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಕನ್ನಡ ನುಡಿ ಸಡಗರ ಸಾಹಿತ್ಯ ಸಮ್ಮೇಳನದ ಅಂಗವಾಗಿ ನಡೆದ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬರಹಗಾರರು ಅಧ್ಯಯನ ಶೀಲರಾಗಬೇಕು. ಇತರರ ಸಾಹಿತ್ಯವನ್ನು ಓದಿ, ಅದರಲ್ಲಿ ಒಳ್ಳೆಯದನ್ನು ಅಳವಡಿಸಿಕೊಳ್ಳಬೇಕು. ಅಗತ್ಯವಿದ್ದಲ್ಲಿ ಮಾರ್ಗದರ್ಶನ ನೀಡುವ ಮೂಲಕ ಉತ್ತಮ ಸಾಹಿತ್ಯ ರಚನೆಗೆ ಪ್ರೇರಣೆ ನೀಡಬೇಕು. ಇದರಿಂದ ಸಾಹಿತ್ಯ ಸಂವರ್ಧನೆಗೂ, ಸ್ನೇಹ ಬಲವರ್ಧನೆಗೂ ಸಹಾಯವಾಗುತ್ತದೆ ಎಂದು ಅವರು ಹೇಳಿದರು.

ಇಂದಿನ ಕವಿಗೋಷ್ಠಿಯಲ್ಲಿ ಕವಿ-ಕವಯಿತ್ರಿಯರು ಪ್ರಬುದ್ಧ ಕವಿತೆಗಳನ್ನು ವಾಚಿಸಿದ್ದಾರೆ. ಅವರ ಸಾಹಿತ್ಯ ಕೃಷಿ ಮುಂದುವರಿದು, ಭವಿಷ್ಯದಲ್ಲಿ ಕನ್ನಡ ಸಾಹಿತ್ಯ ಭಂಡಾರಕ್ಕೆ ಮಹತ್ವದ ಕೊಡುಗೆ ನೀಡಲಿ ಎಂದು ಅವರು ಆಶಿಸಿದರು.

> "ವಾಸ್ತವಿಕ ಬದುಕಿಗೆ ಹತ್ತಿರವಾಗುವ, ಪ್ರಚಲಿತ ವಿಷಯಗಳನ್ನು ಪ್ರತಿಬಿಂಬಿಸುವ ಕವಿತೆಗಳು ಜನಮನ ಸೆಳೆಯುತ್ತವೆ"
> – ಶಿವಶಾಂತಾ ಬಿಸನಳ್ಳಿ, ಸಾಹಿತಿ

ಆಶಯ ನುಡಿಗಳನ್ನಾಡಿದ ಪ್ರೊ. ಪ್ರಕಾಶ ಸುಣಗಾರ, "ಕಾವ್ಯ ಸಾಹಿತ್ಯದ ಜೀವಾಳ. 'ರವಿ ಕಾಣದ್ದನ್ನು ಕವಿ ಕಾಣುವನು' ಎಂಬಂತೆ ಶಬ್ದ ಮತ್ತು ನುಡಿಗಳು ಅರ್ಥಪೂರ್ಣವಾಗಿರಬೇಕು. ಯುವ ಬರಹಗಾರರು ಸರಳ ಭಾಷೆಯಲ್ಲಿ ಎಲ್ಲರಿಗೂ ಅರ್ಥವಾಗುವಂತೆ ಕವಿತೆ ಬರೆಯಬೇಕು" ಎಂದು ಹೇಳಿದರು.

ಸಮ್ಮೇಳನದ ಸರ್ವಾಧ್ಯಕ್ಷೆ ಶ್ರೀಮತಿ ರತ್ನಾ ಬದಿ ಸಂದರ್ಭೋಚಿತವಾಗಿ ಮಾತನಾಡಿದರು. ಅತಿಥಿಗಳಾಗಿ ಸಾಹಿತಿ ಪರ್ವಿನ್‌ಭಾನು ಬುಳ್ಳಣ್ಣವರ, ರಾಜೇಶ್ವರಿ ಹಿರೇಮಠ, ಮಂಜುನಾಥ ಭೀಮಕ್ಕಣ್ಣವರ, ಎಲ್.ಐ. ಲಕ್ಕಮ್ಮನವರ, ಶಿವಲಿಂಗಪ್ಪ ಅಣ್ಣಿಗೇರಿ, ಶರಣಪ್ಪ ಹೊಸಂಗಡಿ ಉಪಸ್ಥಿತರಿದ್ದರು.

ಚೇತನ ಫೌಂಡೇಶನ್ ಅಧ್ಯಕ್ಷ ಚಂದ್ರಶೇಖರ ಮಾಡಲಗೇರಿ ಸ್ವಾಗತಿಸಿದರು. ಡಾ. ಜೆ. ಪ್ರೇಮಾ ನಿರೂಪಿಸಿದರು. ಸುಜಾತಾ ಪಾಟೀಲ ವಂದಿಸಿದರು.

ಕಾರ್ಯಕ್ರಮದಲ್ಲಿ ದೀಪ್ತಿ ಪಾಠಕ, ಪುಷ್ಪಲತಾ ಬಸವರಾಜ ಬಳ್ಳಾರಿ, ಚಂಪಾ ಪಾಟೀಲ, ಸುಮತಿ ಮುರುಗೇಶ ಗದಗಿನಮಠ, ಉಡಚಮ್ಮ ಮುದಿಯಪ್ಪ ವಾಲ್ಮೀಕಿ, ಪ್ರೊ. ಸಿದ್ದಲಿಂಗೇಶ ಸಜ್ಜನಶೆಟ್ಟರ, ನಿರ್ಮಲಾ ಚಿತ್ತಾಮೂರ, ಶಕುಂತಲಾ ಬಂಡಿ, ರೇಖಾ ರೊಟ್ಟಿ, ಚಂದ್ರಕಲಾ ಸ್ಥಾವರಮಠ, ವಿಜಯಲಕ್ಷ್ಮೀ ಹಳ್ಳಿ, ಸಂಧ್ಯಾ ಕೋಟಿ, ಸುಶೀಲಾ ಕೋಟಿ, ವೀಣಾ ಕಾವೇರಿ, ಮೀನಾಕ್ಷಿ ಕೊರವನವರ, ಕಾವ್ಯಾ ದಂಡಿನ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಸಾಹಿತಿಗಳು ಮತ್ತು ಗಣ್ಯರು ಪಾಲ್ಗೊಂಡಿದ್ದರು.

ಕವಿಗೋಷ್ಠಿಯಲ್ಲಿ ಬಸವಣ್ಣೆವ್ವ ಹರ್ತಿ, ಜಿ.ಎನ್. ಪಾಟೀಲ, ನೇತ್ರಾ ಕುರಬರ, ಬೂದೇಶ ಮಜ್ಜಿಗುಡ್ಡ, ಸೌಜನ್ಯ ಪಾಟೀಲ, ಭಾಗ್ಯಶ್ರೀ ಹುರಕಡ್ಲಿ, ಶಿಲ್ಪಾ ಮಿಣಜಗಿ, ಕಸ್ತೂರಿ ಕಡಗದ, ರೇಖಾ ನಾಲ್ವಾಡ, ಮೇಘಾ ಬೆಳದಡಿ, ವಿಜಯಲಕ್ಷ್ಮೀ ಬಂಡಿವಾಡ, ಶಶಿಕಲಾ ಕಮತರ, ಜೆ. ಚಂದ್ರಶೇಖರ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ಕವಿಗಳು ನಾಡು-ನುಡಿ, ದೇಶಾಭಿಮಾನ, ಅತ್ತೆ-ಸೊಸೆ ಸಂಬಂಧ, ಸಮಯದ ಮಹತ್ವ, ಹೆಣ್ಣು, ಬಾಲ್ಯವಿವಾಹ, ಪರಿಸರ ಸೇರಿದಂತೆ ಹಲವು ವಿಷಯಗಳ ಕುರಿತು ಕವನ ವಾಚಿಸಿದರು.

### ಪ್ರಕೃತಿ, ಖಗೋಳ ಮತ್ತು ವಿಜ್ಞಾನ ಅನುಭವದ ಮೂಲಕ ಕಲಿಕೆ – ತಾರಾಲಯದಲ್ಲಿ ವಿಶೇಷ ಪ್ರದರ್ಶನ

# ವಿದ್ಯಾರ್ಥಿಗಳಲ್ಲಿ ವಿಜ್ಞಾನ ಚಿಂತನೆಗೆ ಉತ್ತೇಜನ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಭಾಗದಲ್ಲಿರುವ ಪ್ಲಾನಿಟೋರಿಯಂನಲ್ಲಿ ನಡೆಯುತ್ತಿರುವ "ಖಗೋಳ ವಿಸ್ಮಯ" ಬೇಸಿಗೆ ಶಿಬಿರದ 15ನೇ ದಿನದ 69ನೇ ಪ್ರದರ್ಶನವು ವಿಜ್ಞಾನಾಸಕ್ತ ವಿದ್ಯಾರ್ಥಿಗಳಲ್ಲಿ ಹೊಸ ಚಿಂತನೆಗೆ ದಾರಿ ತೆರೆದಿತು. ರೋಣ ಹಾಗೂ ಮುಂಡರಗಿ ತಾಲೂಕಿನ ವಿದ್ಯಾರ್ಥಿಗಳು ಖಗೋಳ ವೀಕ್ಷಣೆಯಲ್ಲಿ ಭಾಗವಹಿಸಿ ಪ್ರಕೃತಿ ಮತ್ತು ವಿಜ್ಞಾನವನ್ನು ಅನುಭವದ ಮೂಲಕ ಅರಿತುಕೊಂಡರು.



ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಆರ್.ಎಸ್. ಬುರಡಿ ಅವರು, ಪಕ್ಷಿಗಳ ಗೂಡು ನಿರ್ಮಾಣವನ್ನು ಉದಾಹರಿಸಿ, ಪ್ರಕೃತಿಯಲ್ಲಿರುವ ಪ್ರತಿಯೊಂದು ಜೀವಿಯೂ ಒಂದು ಇಂಜಿನಿಯರ್ ಎಂದರು. ಖಗೋಳ ವಿಸ್ಮಯದಲ್ಲಿ ಕಾಣುವ ಗ್ರಹಗಳು ಹಾಗೂ ನಕ್ಷತ್ರಗಳು ನಿಖರ ನಿಯಮ ಮತ್ತು ಸಮತೋಲನದ ಮೇಲೆ ನಿರ್ಮಿತವಾಗಿದ್ದು, ಪ್ರಕೃತಿಯನ್ನು ಗಮನಿಸಿದಾಗ ವಿಜ್ಞಾನದ ಮೂಲ ತತ್ವಗಳು ಸ್ಪಷ್ಟವಾಗುತ್ತವೆ ಎಂದು ಹೇಳಿದರು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನ್ಯಾಸಕರಾದ ಯಲ್ಲಪ್ಪ ಹಂದ್ರಾಳ ಅವರು, ಮೂಲ ವಿಜ್ಞಾನದ ಮಹತ್ವವನ್ನು ಒತ್ತಿಹೇಳುತ್ತಾ, ಖಗೋಳ ವಿಸ್ಮಯವು ವಿದ್ಯಾರ್ಥಿಗಳಿಗೆ ಕೇವಲ ವೀಕ್ಷಣೆಯಲ್ಲ, ಚಿಂತನೆಗೆ ವೇದಿಕೆಯಾಗಿದೆ ಎಂದರು. ಆಕಾಶದಲ್ಲಿನ ಅನೇಕ ರಹಸ್ಯಗಳನ್ನು ತಿಳಿಯಲು ಮೂಲ ವಿಜ್ಞಾನವೇ ಆಧಾರವಾಗಿದ್ದು, ಈ ಶಿಬಿರವು ವಿದ್ಯಾರ್ಥಿಗಳಲ್ಲಿ ಸಂಶೋಧನಾ ಮನೋಭಾವವನ್ನು ಬೆಳೆಸುತ್ತದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾದ ಶಂಕರ ಹಡಗಲಿ ಅವರು, ನಿಸರ್ಗವನ್ನು ಆಳವಾಗಿ ಅರ್ಥಮಾಡಿಕೊಳ್ಳುವ ದೃಷ್ಟಿಕೋನವನ್ನು ಈ ಶಿಬಿರ ಬೆಳೆಸುತ್ತದೆ ಎಂದರು. ಸಾಹಿತ್ಯಿಕ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಕೃತಿಗಳಂತೆ, ಈ ಶಿಬಿರವೂ ಪ್ರಕೃತಿಯನ್ನು ನೋಡುವುದಷ್ಟೇ ಅಲ್ಲ, ಅನುಭವಿಸುವ ಅವಕಾಶ ನೀಡುತ್ತದೆ ಎಂದು ಹೇಳಿದರು.

> "ಖಗೋಳ, ಪ್ರಕೃತಿ ಮತ್ತು ನಮ್ಮ ಸುತ್ತಮುತ್ತಲಿನ ಪರಿಸರವು ವಿಸ್ಮಯಗಳ ಆಗರವಾಗಿದೆ"
> – ಆರ್.ಎಸ್. ಬುರಡಿ, ಡಿಡಿಪಿಐ

ಪ್ರಾಸ್ತಾವಿಕವಾಗಿ ಮಾತನಾಡಿದ ಎಂ.ಎಚ್. ಸವದತ್ತಿ ಅವರು, ಇಂತಹ ತಾರಾಲಯ ಅನುಭವಗಳು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ, ಕುತೂಹಲ ಹಾಗೂ ಅನ್ವೇಷಣ ಮನೋಭಾವವನ್ನು ಬೆಳೆಸುತ್ತವೆ. ಭವಿಷ್ಯದ ವಿಜ್ಞಾನಿಗಳಾಗಲು ಮಕ್ಕಳಿಗೆ ಪ್ರೇರಣೆಯಾಗುವ ವೇದಿಕೆಯಾಗಿದೆ ಎಂದು ಹೇಳಿದರು.

ಒಟ್ಟಾರೆ, ಖಗೋಳ ವಿಸ್ಮಯ ಬೇಸಿಗೆ ಶಿಬಿರವು ಪ್ರಕೃತಿ, ಮೂಲ ವಿಜ್ಞಾನ ಮತ್ತು ಅನುಭವಾತ್ಮಕ ಕಲಿಕೆಯನ್ನು ಒಗ್ಗೂಡಿಸಿ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸುವ ಅಪೂರ್ವ ವೇದಿಕೆಯಾಗಿದೆ.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳು ಮತ್ತು ಸಿಬ್ಬಂದಿ ಸಕ್ರಿಯವಾಗಿ ಭಾಗವಹಿಸಿದರು. ಶಿಬಿರವನ್ನು ಯಶಸ್ವಿಗೊಳಿಸಿದ ತಂಡದ ಸಂಪನ್ಮೂಲ ವ್ಯಕ್ತಿಗಳಾದ ಎಂ.ಎಚ್. ಸವದತ್ತಿ, ಎಂ.ಎ. ಯರಗುಡಿ, ಶಾಮ್ ಲಾಂಡೆ, ತಾರಾಲಯದ ಸಿಬ್ಬಂದಿಗಳಾದ ಸಾಗರ, ಸದಾನಂದ, ವೆಂಕಟೇಶ್ ಹಾಗೂ ಐಎಂಎ ಪ್ರತಿನಿಧಿ ಬಸವರಾಜ ಕಡಿವಾಳ, ತಾರಾಲಯದ ನೋಡಲ್ ಅಧಿಕಾರಿಗಳಾದ ಶ್ರೀಮತಿ ಸರೋಜಿನಿ ಬಂಡಿವಡ್ಡರ ಅವರನ್ನು ಗೌರವಿಸಲಾಯಿತು.

### ಸುಮಾರು ರೂ.37 ಲಕ್ಷ ಬಡ್ಡಿಯೊಂದಿಗೆ ಮರಳಿಸಲು ಆದೇಶ – ಮಾನಸಿಕ ಹಾನಿಗೆ ಪರಿಹಾರವೂ ಕೊಡಿ

# ಠೇವಣಿ ಹಣ ವಾಪಸು ಕೊಡದ ಸೊಸೈಟಿಗೆ ದಂಡ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ತಾಲ್ಲೂಕಿನ ಹಾರೋಬೆಳವಡಿ ಗ್ರಾಮದ ರಾಮಪ್ಪ, ಶ್ರೀಮತಿ ಶಂಕರವ್ವ, ವಿಜಯಾ, ಗಿರಿಜವ್ವಾ, ಶಾಂತವ್ವ, ರತ್ನ ಹಾಗೂ ಶಿವಲೀಲಾ ಅವರು ಎದುರುದಾರರ ಸೊಸೈಟಿಯಲ್ಲಿ ವಿವಿಧ ಠೇವಣಿಗಳು (ಎಫ್.ಡಿ, ಉಳಿತಾಯ ಖಾತೆ ಹಾಗೂ ಕ್ಯಾಶ್ ಸರ್ಟಿಫಿಕೇಟ್) ಹೊಂದಿದ್ದು, ವೈಯಕ್ತಿಕ ಅಗತ್ಯಕ್ಕಾಗಿ ಹಣವನ್ನು ಮರಳಿ ನೀಡುವಂತೆ ಅನೇಕ ಬಾರಿ ಮನವಿ ಮಾಡಿದ್ದರು. ಆದಾಗ್ಯೂ, ಸೊಸೈಟಿ ಹಣವನ್ನು ನೀಡದೆ ಸೇವಾ ನ್ಯೂನ್ಯತೆ ತೋರಿದ ಹಿನ್ನೆಲೆಯಲ್ಲಿ, ಅವರು ಜಿಲ್ಲಾ ಗ್ರಾಹಕರ ಆಯೋಗಕ್ಕೆ 06-01-2026 ರಂದು ದೂರು ಸಲ್ಲಿಸಿದ್ದರು.



ದೂರು ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯೆ ಶ್ರೀಮತಿ ವಿಶಾಲಾಕ್ಷಿ ಅ. ಬೋಳಶೆಟ್ಟಿ ಅವರು, ದೂರುದಾರರು ಸಲ್ಲಿಸಿದ ದಾಖಲೆಗಳ ಆಧಾರದ ಮೇಲೆ ಅವರು ಹೇಳಿದ ಮೊತ್ತಗಳು ಸೊಸೈಟಿಯಲ್ಲಿ ಇರುವುದನ್ನು ದೃಢಪಡಿಸಿದರು. ದೂರುದಾರರಿಗೆ ಹಣದ ಅವಶ್ಯಕತೆ ಇದ್ದರೂ, ಅದನ್ನು ಮರಳಿಸದೆ ಇರುವುದನ್ನು ಗ್ರಾಹಕರ ರಕ್ಷಣಾ ಕಾಯ್ದೆಯಡಿ "ಸೇವಾ ನ್ಯೂನ್ಯತೆ" ಎಂದು ಪರಿಗಣಿಸಿ ತೀರ್ಪು ನೀಡಿದರು.

ಅದರಂತೆ, ಎಫ್.ಡಿ, ಉಳಿತಾಯ ಖಾತೆ ಮತ್ತು ಕ್ಯಾಶ್ ಸರ್ಟಿಫಿಕೇಟ್‌ಗಳಲ್ಲಿ ಇರುವ ಸುಮಾರು ರೂ.37 ಲಕ್ಷ ಮೊತ್ತವನ್ನು ಬಡ್ಡಿಯೊಂದಿಗೆ ಒಂದು ತಿಂಗಳೊಳಗಾಗಿ ದೂರುದಾರರಿಗೆ ಹಿಂತಿರುಗಿಸಲು ಆಯೋಗ ಆದೇಶಿಸಿದೆ. ಜೊತೆಗೆ, ದೂರುದಾರರಿಗೆ ಉಂಟಾದ ಅನಾನುಕೂಲ ಹಾಗೂ ಮಾನಸಿಕ ಹಿಂಸೆಗೆ ರೂ.50,000 ಪರಿಹಾರ ಹಾಗೂ ರೂ.10,000 ಪ್ರಕರಣ ವೆಚ್ಚವನ್ನು ಪಾವತಿಸಲು ಸೊಸೈಟಿಯ ಚೇರ್ಮನ್ ಡಾ. ವಿ.ಎಸ್. ಸಾಧುನವರ ಅವರಿಗೆ ಸೂಚಿಸಿದೆ.

> "ಹಣ ಮರಳಿಸದೇ ಇರುವುದು ಗ್ರಾಹಕರ ರಕ್ಷಣಾ ಕಾಯ್ದೆಯಡಿ ಸೇವಾ ನ್ಯೂನ್ಯತೆ"
> –ಜಿಲ್ಲಾ ಗ್ರಾಹಕರ ಆಯೋಗ

### ಅಕ್ಕಮಹಾದೇವಿ ಜಯಂತಿ ಸಂಭ್ರಮ – ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರ

# ವಚನಗಳಲ್ಲಿ ಜೀವನ ಮೌಲ್ಯಗಳ ಸಂದೇಶವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ಮಠದ ಡಾ. ಶ್ರೀ ಸಿದ್ಧಲಿಂಗ ಸ್ವಾಮಿಗಳ ಅನುಭವ ಮಂಟಪದಲ್ಲಿ ಶ್ರೀ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ವತಿಯಿಂದ ನಡೆದ ಅಕ್ಕಮಹಾದೇವಿ ಜಯಂತಿ ಕಾರ್ಯಕ್ರಮದಲ್ಲಿ, ಅಕ್ಕಮಹಾದೇವಿಯ ವಚನಗಳಲ್ಲಿ ಸಾಗರದಷ್ಟು ಆಳವಾದ ಜ್ಞಾನ ಅಡಗಿದ್ದು, ಆಧ್ಯಾತ್ಮದ ಜೊತೆಗೆ ಪ್ರಾಣಿದಯೆ, ಪರಿಸರ ಪ್ರೇಮ, ಯೋಗ, ಆಹಾರ ಪದ್ಧತಿ, ಧೈರ್ಯ ಹಾಗೂ ಸ್ಥೈರ್ಯದ ಮೌಲ್ಯಗಳನ್ನು ಒಳಗೊಂಡಿವೆ ಎಂದು ಉಪನ್ಯಾಸಕರಾದ ಶ್ರೀಮತಿ ಶಾಂತಲಾ ಹಂಚಿನಾಳ ತಿಳಿಸಿದರು.



ಅವರು, ವಚನಗಳ ಮಹತ್ವವನ್ನು ವಿವರಿಸಿ, ಅವು ಜೀವನದಲ್ಲಿ ಅನುಸರಿಸಬಹುದಾದ ಮೌಲ್ಯಗಳನ್ನು ಸಾರುತ್ತವೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಶ್ರೀಮತಿ ಶಾಂತಾದೇವಿ ತುಪ್ಪದ ಅವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು. ಕೇಂದ್ರದ ಸದಸ್ಯರಿಗಾಗಿ ವಚನ ಗಾಯನ ಸ್ಪರ್ಧೆ ಏರ್ಪಡಿಸಲಾಗಿದ್ದು, ಪ್ರಥಮ ಸ್ಥಾನವನ್ನು ಶ್ರೀಮತಿ ವಿಜಯಲಕ್ಷ್ಮೀ ಚಿತ್ತರಗಿ, ದ್ವಿತೀಯ ಸ್ಥಾನವನ್ನು ಡಾ. ಗಿರಿಜಾ ಹಸಬಿ ಹಾಗೂ ತೃತೀಯ ಸ್ಥಾನವನ್ನು ಸುವರ್ಣ ಹೊಸಂಗಡಿ ಪಡೆದರು. ನಿರ್ಣಾಯಕರಾಗಿ ಶ್ರೀಮತಿ ಗೌರಕ್ಕ ಬಡಿಗಣ್ಣವರ ಉಪಸ್ಥಿತರಿದ್ದರು.

ಖಜಾಂಚಿ ಶ್ರೀಮತಿ ನಿರ್ಮಲಾ ಪಾಟೀಲ ಅವರು ತಮ್ಮ ಅಧಿಕಾರ ಅವಧಿಯ ಆಯ-ವ್ಯಯದ ವಿವರಗಳನ್ನು ಮಂಡಿಸಿದರು. ಅಧ್ಯಕ್ಷರಾದ ಶ್ರೀಮತಿ ಶಾಂತಾದೇವಿ ತುಪ್ಪದ ಅವರು 202526ನೇ ಸಾಲಿನ ಕಾರ್ಯಚಟುವಟಿಕೆಗಳನ್ನು ವಿವರಿಸಿ ಎಲ್ಲರ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಿದರು. ನೂತನ ಪದಾಧಿಕಾರಿಗಳಾಗಿ ಅಧ್ಯಕ್ಷೆ ಶ್ರೀಮತಿ ಜಯಶ್ರೀ ಉಗಲಾಟದ ಹಾಗೂ ಕಾರ್ಯದರ್ಶಿ ಶ್ರೀಮತಿ ಶಾರದಾ ಬೊಮ್ಮಸಾಗರ ಅವರಿಗೆ ಸೇವಾ ಹಸ್ತಾಂತರ ಮಾಡಲಾಗಿದ್ದು, ಶ್ರೀಮತಿ ಶಾಂತಲಾ ಹಂಚಿನಾಳ ಅವರು ಪ್ರಮಾಣ ವಚನ ಬೋಧಿಸಿದರು.

ಯೋಗಾಚಾರ್ಯ ಕೆ.ಎಸ್. ಪಲ್ಲೇದ ಅವರು ಕೇಂದ್ರದ ಮಹಿಳಾ ಸಂಘಟನೆ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿ, ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಡಾ. ಗಿರಿಜಾ ಹಸಬಿ ಅವರು ಅತಿಥಿಗಳನ್ನು ಪರಿಚಯಿಸಿದರು. ಶ್ರೀಮತಿ ಶಿವಲೀಲಾ ಅಕ್ಕಿ ನಿರೂಪಣೆ ಮಾಡಿದರು. ಶ್ರೀಮತಿ ಶಾರದಾ ಬೊಮ್ಮಸಾಗರ ವಂದಿಸಿದರು.

ಈ ಸಂದರ್ಭದಲ್ಲಿ ಅಕ್ಕಮಹಾದೇವಿ ಛಟ್ಟಿ, ಸುಶೀಲಾ ಕೋಟಿ, ಸಂಧ್ಯಾ ಕೋಟಿ, ರತ್ನಕ್ಕಾ ಪಾಟೀಲ, ರೇಖಾ ರೊಟ್ಟಿ, ಉಮಾ ಕವಳಿಕಾಯಿ, ರೇಣುಕಾ ಅಮಾತ್ಯ, ಶಾರದಾ ಸಜ್ಜನರ, ಮಾಧುರಿ ಮಾಳೆಕೊಪ್ಪ, ಸುಜಾತಾ ಬಳ್ಳಾರಿ, ಜ್ಯೋತಿ ದಾನಪ್ಪಗೌಡ್ರ, ಅರುಣಾ ಹಳಕಟ್ಟಿ, ಮಹಾದೇವಿ ಚಿತ್ತರಗಿ, ಶೀಲಾ ಗೋಟಡಕಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಿತು.

### ಸತ್ಸಂಗದಲ್ಲಿ ಸಾಧಕರಿಗೆ ಸನ್ಮಾನ ವಿದ್ಯಾರ್ಥಿಗಳ ಪ್ರತಿಭೆಗೆ ಗೌರವ

# ಶಿಕ್ಷಣದ ಜೊತೆ ಸಂಸ್ಕಾರ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ರಾಮಗೇರಿ ಗ್ರಾಮದ ಗ್ರಾಮ ದೇವತೆ ದೇವಸ್ಥಾನದಲ್ಲಿ ಭಾನುವಾರ ದುರ್ಗಾದೇವಿ ಸೇವಾ ಸಮಿತಿ ವತಿಯಿಂದ ಆಯೋಜಿಸಲಾದ 23ನೇ ಸತ್ಸಂಗ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹನೀಯರು ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.



ಕಾರ್ಯಕ್ರಮದ ರೂವಾರಿ ಹಾಗೂ ಲಕ್ಷ್ಮೇಶ್ವರ ಎಪಿಎಂಸಿ ಮಾಜಿ ಅಧ್ಯಕ್ಷ ಬಸಣ್ಣ ಬೆಟಗೇರಿ ಮಾತನಾಡಿ, ಸತ್ಸಂಗಗಳಲ್ಲಿ ಭಾಗವಹಿಸುವುದರಿಂದ ಸಮಾಜದಲ್ಲಿ ಸಾಮರಸ್ಯ ಬೆಳೆಯುತ್ತದೆ. ಉತ್ತಮ ವಿಚಾರಗಳು ಚರ್ಚೆಗೆ ಬರುತ್ತವೆ. ಯುವಜನತೆ ಇಂತಹ ಸತ್ಸಂಗಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಹೇಳಿದರು. ಜೊತೆ-ಗೆ, ಪ್ರತಿಭಾವಂತರನ್ನು ಗುರುತಿಸಿ ಸನ್ಮಾನಿಸುವುದು ಉತ್ತಮ ಪರಂಪರೆ ಎಂದು ಅಭಿಪ್ರಾಯಪಟ್ಟರು.

ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಮಹಾವಿದ್ಯಾಲಯಗಳ ರಾಜ್ಯಶಾಸ್ತ್ರ ಪ್ರಾಧ್ಯಾಪಕರ ಸಂಘದ ನೂತನ ಅಧ್ಯಕ್ಷ ಎಚ್. ಎನ್. ಕೆರೂರ ಮಾತನಾಡಿ, ರಾಮಗೇರಿ ಗ್ರಾಮದಲ್ಲಿ ಶಿಕ್ಷಣಕ್ಕೆ ಹಿಂದಿನಿಂದಲೂ ಪ್ರೋತ್ಸಾಹ ನೀಡಲಾಗುತ್ತಿದೆ. ಇದರ ಪರಿಣಾಮವಾಗಿ ಗ್ರಾಮ ಶೈಕ್ಷಣಿಕವಾಗಿ ಪ್ರಗತಿ ಸಾಧಿಸಿದೆ. ಇದು ಸತ್ಸಂಗದ ಫಲ ಎಂದು ಹೇಳಿದರು. ಅಲ್ಲದೆ, ತಂದೆ-ತಾಯಿ ಹಾಗೂ ಜನ್ಮಭೂಮಿಯನ್ನು ಎಂದಿಗೂ ಮರೆಯಬಾರದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪೊಲೀಸ್ ಅಧಿಕಾರಿ ಮಂಜುನಗೌಡ ಪಾಟೀಲ ಹಾಗೂ ಹುಬ್ಬಳ್ಳಿ ನಗರ ಭಾಗದ ಬಿಇಒ ಎಚ್.ಎಂ. ಪಡ್ನೇಶಿ ಮಾತನಾಡಿ, ಪಾಲಕರು ಮಕ್ಕಳಿಗೆ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ಕಲಿಸಬೇಕು. ಸಂಸ್ಕಾರವಂತ ಮಕ್ಕಳು ದೇಶದ ಅಮೂಲ್ಯ ಸಂಪತ್ತು. ಜೀವನದಲ್ಲಿ ಕಷ್ಟಪಟ್ಟಾಗ ಮಾತ್ರ ಗುರಿ ಸಾಧನೆ ಸಾಧ್ಯ ಎಂದು ತಿಳಿಸಿದರು.

ಶಿಕ್ಷಕಿ ರತ್ನ ಕುಂಬಾರ ಅವರು ನೈತಿಕತೆ ಮತ್ತು ಮೌಲ್ಯಗಳ ಮಹತ್ವ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮಕ್ಕೆ ಯಲ್ಲಮ್ಮ ಕಲ್ಲಪ್ಪ ಬಿಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಚನಬಸಪ್ಪ ಲಿಂಗಶೆಟ್ಟಿ, ಶಿವಣ್ಣ ಬೆಟಗೇರಿ, ಅಣವೀರಪ್ಪ ಮೂರಶಿಳ್ಳಿ, ಹನಮಂತಪ್ಪ ಹಿತ್ತಲಮನಿ, ಜಗದೀಶ ಕುಮಶಿ, ಬಸವರಾಜ ಕುಬಟಿ, ಈಶ್ವರ ಹೊಸಮನಿ, ಗಂಗಮ್ಮ ಕಾಳೆ, ಅಡಿವಕ್ಕ ಬೆಟಗೇರಿ, ಮುತ್ತಕ್ಕ ಬೆಟಗೇರಿ, ಲತಾ ಸಜ್ಜಗಾರ, ಕೆ.ಪಿ. ಕಂಬಳಿ, ಪುಷ್ಪಾ ಬೆಟಗೇರಿ, ಜಯಶ್ರೀ ಹರ್ತಿ, ಬಸಪ್ಪ ಸಿಂಗಣ್ಣವರ, ಬಸವರಾಜ ಗಳಗನಾಥ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಬಸವರಾಜ ಗಳಗನಾಥ ಸ್ವಾಗತಿಸಿದರು. ಗೀತಾ ಕಾಳೆ ಕಾರ್ಯಕ್ರಮವನ್ನು ನಿರೂಪಿಸಿದರು. ಬಸವರಾಜ ಯರಗುಪ್ಪಿ ವಂದಿಸಿದರು.

> "ಸತ್ಸಂಗವು ಸಮಾಜದಲ್ಲಿ ಸಾಮರಸ್ಯ ಮೂಡಿಸುವ ಶಕ್ತಿಯಾಗಿದೆ; ಯುವಜನತೆ ಇದರಲ್ಲಿ ಹೆಚ್ಚು ಪಾಲ್ಗೊಳ್ಳಬೇಕು"
> – ಬಸಣ್ಣ ಬೆಟಗೇರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka